ಸಂಪುಟ: 11 ಸಂಚಿಕೆ: 189 ಪುಟ: 4+2 ಬೆಲೆ : 3.00 ಮಂಗಳವಾರ, ಸೆಪ್ಟೆಂಬರ್ 01, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 189 Pages : 4+2 Rate : 3.00 Tuesday , September 01, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

### ಗದಗ ಜಿಲ್ಲೆಯನ್ನು ಬರಪೀಡಿತ ಎಂದು ಘೋಷಿಸಲು ರೈತ-ವಿದ್ಯಾರ್ಥಿಗಳ ಜನಶಕ್ತಿ ಪಾದಯಾತ್ರೆ

# ಬರ ಘೋಷಣೆಗಾಗಿ ಸಿಡಿದೆದ್ದ ಜೆನ್ ಜಿ ಶಕ್ತಿ

**ಜೆನ್ ಜಿ ವೋಟರ್ಸ್ ಅಂಡ್ ಸಿಟಿಜನ್ಸ್ ಫೋರಂ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ** | **ಚನ್ನಮ್ಮ ವೃತ್ತದಿಂದ ಡಿಸಿ ಕಚೇರಿವರೆಗೆ ಹೆಜ್ಜೆ** | **ಮುಳಗುಂದ ನಾಕಾದಲ್ಲಿ ಮಾನವ ಸರಪಳಿ, ರಸ್ತೆ ತಡೆ; ಪೊಲೀಸರೊಂದಿಗೆ ವಾಗ್ವಾದ**

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಬರದ ಕರಿನೆರಳು ಆವರಿಸಿದ್ದರೂ ಗದಗ ಜಿಲ್ಲೆಯನ್ನು ಬರಪೀಡಿತ ಪಟ್ಟಿಯಿಂದ ಹೊರಗಿಟ್ಟಿರುವ ಕ್ರಮದ ವಿರುದ್ಧ ರೈತರು, ವಿದ್ಯಾರ್ಥಿಗಳು ಹಾಗೂ ವಿವಿಧ ಸಂಘಟನೆಗಳು ಸೋಮವಾರ ಬೀದಿಗಿಳಿದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಗದಗ ಜಿಲ್ಲೆಯ ಎಲ್ಲ ಅರ್ಹ ತಾಲೂಕುಗಳನ್ನು ತಕ್ಷಣವೇ ಬರಪೀಡಿತ ಪ್ರದೇಶಗಳೆಂದು ಘೋಷಿಸಬೇಕು ಎಂದು ಆಗ್ರಹಿಸಿ ಜೆನ್ ಜಿ ವೋಟರ್ಸ್ ಅಂಡ್ ಸಿಟಿಜನ್ಸ್ ಫೋರಂ ಹಾಗೂ ರೈತರ ಒಕ್ಕೂಟದ ನೇತೃತ್ವದಲ್ಲಿ 'ರೈತರ ನ್ಯಾಯಕ್ಕಾಗಿ ಜನಶಕ್ತಿ ಪಾದಯಾತ್ರೆ' ನಡೆಯಿತು. ನಗರದ ಚನ್ನಮ್ಮ ವೃತ್ತದಿಂದ ಆರಂಭವಾದ ಪಾದಯಾತ್ರೆಯಲ್ಲಿ ರೈತರು ಮತ್ತು ವಿದ್ಯಾರ್ಥಿಗಳು ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಜಿಲ್ಲೆಯಲ್ಲಿ ಉಂಟಾಗಿರುವ ಬರ ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಹಾಗೂ ರೈತರಿಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

**ಮುಳಗುಂದ ನಾಕಾದಲ್ಲಿ ಮಾನವ ಸರಪಳಿ**

ಪಾದಯಾತ್ರೆ ಮುಳಗುಂದ ನಾಕಾ ತಲುಪುತ್ತಿದ್ದಂತೆ ಪ್ರತಿಭಟನಾಕಾರರು ರಸ್ತೆ ಮಧ್ಯೆ ಮಾನವ ಸರಪಳಿ ರಚಿಸಿ ಕೆಲಕಾಲ ರಸ್ತೆ ತಡೆ ನಡೆಸಿದರು. ಬಳಿಕ ಜಿಲ್ಲಾಧಿಕಾರಿ ಕಚೇರಿಯತ್ತ ಸಾಗಿದ ಪ್ರತಿಭಟನಾಕಾರರು, ಗದಗ–ಹುಬ್ಬಳ್ಳಿ ಹೆದ್ದಾರಿಯಲ್ಲೂ ರಸ್ತೆ ತಡೆದು ಸರ್ಕಾರದ ವಿರುದ್ಧ ತಮ್ಮ ಆಕ್ರೋಶ ಹೊರಹಾಕಿದರು. ಈ ವೇಳೆ ರಸ್ತೆ ತಡೆ ನಡೆಯುತ್ತಿದ್ದ ಸಂದರ್ಭದಲ್ಲಿಯೇ ಖಾಸಗಿ ವಾಹನವೊಂದು ಮುಂದೆ ಸಾಗಲು ಮುಂದಾದಾಗ ಪ್ರತಿಭಟನಾಕಾರರು ವಾಹನವನ್ನು ತಡೆದರು. ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ಮತ್ತು ಪೊಲೀಸರ ನಡುವೆ ವಾಗ್ವಾದವೂ ನಡೆಯಿತು. ಕೆಲಕಾಲ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿತ್ತು.

**"ಗದಗ ಜಿಲ್ಲೆಗೆ ಮಲತಾಯಿ ಧೋರಣೆ"**

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಜೆನ್ ಜಿ ವೋಟರ್ಸ್ ಅಂಡ್ ಸಿಟಿಜನ್ಸ್ ಫೋರಂ ರೂವಾರಿ ಅನಿಲ ಮೆಣಸಿನಕಾಯಿ ಮಾತನಾಡಿ, ಜಿಲ್ಲೆಯಲ್ಲಿ ಮುಂಗಾರು ಕೈಕೊಟ್ಟ ಪರಿಣಾಮ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆಗಳು ನೆಲಕಚ್ಚಿವೆ. ರಾಜ್ಯ ಸರ್ಕಾರ ಮೊದಲ ಹಂತದಲ್ಲಿ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದ್ದರೂ ಗದಗ ಜಿಲ್ಲೆಗೆ ಅನ್ಯಾಯ ಮಾಡಲಾಗಿದೆ ಎಂದು ತೀವ್ರವಾಗಿ ಆರೋಪಿಸಿದರು.





> ಗದಗ ಜಿಲ್ಲೆಯಲ್ಲಿ ಮುಂಗಾರು ಕೈಕೊಟ್ಟು ರೈತರ ಬೆಳೆಗಳು ನೆಲಕಚ್ಚಿವೆ. ಕೇವಲ ಹಳೆಯ ಮಳೆ ಅಂಕಿ–ಅಂಶಗಳ ಆಧಾರದ ಮೇಲೆ ಜಿಲ್ಲೆಯ ಬರ ಪರಿಸ್ಥಿತಿಯನ್ನು ನಿರ್ಧರಿಸಬಾರದು. ಗ್ರಾಮವಾರು ವಾಸ್ತವಿಕ ಸಮೀಕ್ಷೆ ನಡೆಸಿ, ಎಲ್ಲ ಅರ್ಹ ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಬೇಕು. ಇಲ್ಲದಿದ್ದರೆ ಜಿಲ್ಲೆಯ ಜನರನ್ನು ಸಂಘಟಿಸಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು.
>
> - ಅನಿಲ ಮೆಣಸಿನಕಾಯಿ, ರೂವಾರಿ, ಜೆನ್ ಜಿ ವೋಟರ್ಸ್ ಅಂಡ್ ಸಿಟಿಜನ್ಸ್ ಫೋರಂ

### ಗದಗ ರೈತರ ಪ್ರಮುಖ ಬೇಡಿಕೆಗಳು

1. ಮಳೆ ಕೊರತೆ ಮತ್ತು ಬೆಳೆ ಹಾನಿಯ ವಾಸ್ತವಿಕ ಮಾನದಂಡಗಳನ್ನು ಆಧರಿಸಿ ಗದಗ ಜಿಲ್ಲೆಯ ಎಲ್ಲ ಅರ್ಹ ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇ–ರಿಸಲು ಸರ್ಕಾರಕ್ಕೆ ತಕ್ಷಣ ಶಿಫಾರಸು ಮಾಡಬೇಕು.
2. ಎಸ್‌ಡಿಆರ್‌ಎಫ್ ಮತ್ತು ಎನ್‌ಡಿಆರ್‌ಎಫ್ ಮಾನದಂಡಗಳ ಅನ್ವಯ ಸಂಕಷ್ಟದಲ್ಲಿರುವ ರೈತರಿಗೆ ನೇರ ಬೆಳೆ ಹಾನಿ ಪರಿಹಾರ ಹಾಗೂ ಬೆಳೆ ವಿಮೆ ಹಣವನ್ನು ತಕ್ಷಣ ಬಿಡುಗಡೆ ಮಾಡಬೇಕು.
3. ಜಾನುವಾರುಗಳ ರಕ್ಷಣೆಗಾಗಿ ಮೇವು ಬ್ಯಾಂಕ್ ಹಾಗೂ ಗೋಶಾಲೆಗಳನ್ನು ತೆರೆಯಬೇಕು.
4. ಗ್ರಾಮೀಣ ಭಾಗದಲ್ಲಿ ವಿಬಿಜಿ–ರಾಮ್ ಜಿ ಯೋಜನೆಯಡಿ ಹೆಚ್ಚುವರಿ ಮಾನವ ದಿನಗಳ ಉದ್ಯೋಗ ಒದಗಿಸಬೇಕು.
5. ಸಂಕಷ್ಟದಲ್ಲಿರುವ ರೈತರ ಕೃಷಿ ಸಾಲ ಮರುಪಾವತಿಯನ್ನು ಪುನರ್‌ವ್ಯವಸ್ಥೆಗೊಳಿಸಿ ರೈತರಿಗೆ ಪರಿಹಾರ ಕಲ್ಪಿಸಬೇಕು.

ಬರ ಘೋಷಣೆಗೆ ಕೇವಲ ಹಳೆಯ ಮಳೆ ಅಂಕಿ–ಅಂಶಗಳನ್ನು ಪರಿಗಣಿಸುವ ಬದಲು, ಕಂದಾಯ, ಕೃಷಿ ಮತ್ತು ಜಲಸಂಪನ್ಮೂಲ ಇಲಾಖೆಗಳ ವಿಶೇಷ ತಜ್ಞರ ತಂಡವನ್ನು ರಚಿಸಿ ಗ್ರಾಮವಾರು ವಾಸ್ತವಿಕ ಬೆಳೆ ಹಾನಿ ಸಮೀಕ್ಷೆ ನಡೆಸಬೇಕು ಎಂದು ಅವರು ಆಗ್ರಹಿಸಿದರು.

ಮಣ್ಣಿನ ತೇವಾಂಶ, ಅಂತರ್ಜಲ ಮಟ್ಟದ ಕುಸಿತ ಹಾಗೂ ನೈಜ ಬೆಳೆ ನಷ್ಟದ ಪ್ರಮಾಣವನ್ನು ಆಧರಿಸಿ ಸರ್ಕಾರಕ್ಕೆ ತುರ್ತು ವರದಿ ಸಲ್ಲಿಸುವ ಮೂಲಕ ಗದಗ ಜಿಲ್ಲೆಯ ವಾಸ್ತವಿಕ ಸ್ಥಿತಿಯನ್ನು ಸರ್ಕಾರದ ಗಮನಕ್ಕೆ ತರಬೇಕು ಎಂದು ಒತ್ತಾಯಿಸಿದರು.

**ರಕ್ತ ಸಹಿ ಅಭಿಯಾನದ ಮಾಹಿತಿ ಮುಖ್ಯಮಂತ್ರಿಗಳಿಗೆ ನೀಡಿ**

ಜಿಲ್ಲಾಡಳಿತವು ವಾಸ್ತವಿಕ ಪರಿಸ್ಥಿತಿಯ ಸಮಗ್ರ ವರದಿ ಸಿದ್ಧಪಡಿಸಿ, ಜನರು ನಡೆಸುತ್ತಿರುವ ರಕ್ತ ಸಹಿ ಅಭಿಯಾನದ ಬಗ್ಗೆಯೂ ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಬೇಕು ಎಂದು ಅನಿಲ ಮೆಣಸಿನಕಾಯಿ ಒತ್ತಾಯಿಸಿದರು.

ಬರ ಘೋಷಣೆ ವಿಷಯದಲ್ಲಿ ಸರ್ಕಾರ ಹಾಗೂ ಜಿಲ್ಲಾಡಳಿತ ತುರ್ತು ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಜಿಲ್ಲೆಯಾದ್ಯಂತ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ಉತ್ತರ ಕರ್ನಾಟಕ ಮಹಾಸಭಾ ಅಧ್ಯಕ್ಷ ರವಿಕಾಂತ ಅಂಗಡಿ, ಬಿಜೆಪಿ ಮುಖಂಡ ಸಿದ್ದಪ್ಪ ಪಲ್ಲೇದ, ರೈತ ಮುಖಂಡ ಶಂಕರಗೌಡ ಜಯನಗೌಡ್ರ, ಶಿವರಾಮಕೃಷ್ಣ ಸೇವಾ ಸಮಿತಿಯ ರಾಜು ಖಾನಪ್ಪನವರ, ನಗರಸಭೆ ಸದಸ್ಯ ರಾಘವೇಂದ್ರ ಯಳವತ್ತಿ, ವಸಂತ ಪಡಗದ, ವಿನೋದ ಮೊರಬದ, ಅಯ್ಯಪ್ಪ ಅಂಗಡಿ, ಮೋಹನ ವರವಿ, ಕುಮಾರ ಮಾರನಬಸರಿ, ರಜತ್ ಭೀಮಕರ, ಅಶೋಕ ಕರೂರ, ಎಂ.ಪಿ. ಮುಳಗುಂದ, ಡಿ.ಬಿ. ಕರಿಗೌಡ್ರ, ಅಪ್ಪು ನಮಸ್ತೆಮಠ, ಭದ್ರೇಶ ಕೂಸ್ಲಾಪುರ, ಬಾಬು ಸುಂಕದ, ಮಹೇಶ ಶಿರಹಟ್ಟಿ, ಬಾಬು ಯಲಿಗಾರ, ರವಿ ನರೇಗಲ್, ಆನಂದ ಅಂಗಡಿ, ಇರ್ಷಾದ ಮಾನ್ವಿ, ಚಂದ್ರು ಹರಿಜನ, ಕಿಶನ್ ಮೇರವಾಡೆ, ಅರವಿಂದ ಕೆಲೂರ, ರವಿ ವಗ್ಗನವರ, ಚನ್ನಮ್ಮ ಹುಳಕಣ್ಣವರ, ಸ್ವಾತಿ ಅಕ್ಕಿ, ಸಂಗು ಚಿತ್ತರಗಿ, ಉಡಚಪ್ಪ ಹಳ್ಳಿಕೇರಿ, ಬಸನಗೌಡ ಪೊಲೀಸಪಾಟೀಲ, ಪ್ರವೀಣ ಅಂದೇಲಿ, ಬಸವರಾಜ ಅಡ್ನೂರ, ರಾಮು ವಾಲ್ಮೀಕಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

## ಇಂದು ಗದಗಕ್ಕೆ ಸಿಎಂ ಡಿ.ಕೆ.ಶಿ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಸೆಪ್ಟೆಂಬರ್ 1ರಂದು ಗದಗ ಜಿಲ್ಲೆಗೆ ಭೇಟಿ ನೀಡಿ, ಜಿಲ್ಲೆಯ ಬರ ಪರಿಸ್ಥಿತಿಯನ್ನು ಖುದ್ದಾಗಿ ಪರಿಶೀಲಿಸಲಿದ್ದಾರೆ. ಸೆ.1ರಂದು ಬೆಳಿಗ್ಗೆ 9.30ಕ್ಕೆ ಬೆಂಗಳೂರಿನ ಹೆಚ್.ಎ.ಎಲ್. ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಹೊರಟು, ಬೆಳಿಗ್ಗೆ 10.30ಕ್ಕೆ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಲಿದ್ದಾರೆ. ಅಲ್ಲಿಂದ ಹೆಲಿಕಾಪ್ಟರ್ ಮೂಲಕ ಗದಗಕ್ಕೆ ಆಗಮಿಸುವ ಮುಖ್ಯಮಂತ್ರಿ ಅವರು ಬೆಳಿಗ್ಗೆ 11.15ಕ್ಕೆ ಗದಗ ಜಿಲ್ಲಾಧಿಕಾರಿ ಕಚೇರಿ ಆವರಣಕ್ಕೆ ಆಗಮಿಸಲಿದ್ದಾರೆ. ಬಳಿಕ ಗದಗ ಜಿಲ್ಲೆಯ ವಿವಿಧ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ, ಅಲ್ಲಿನ ವಸ್ತುಸ್ಥಿತಿಯನ್ನು ಪರಿಶೀಲಿಸಲಿದ್ದಾರೆ. ಮಧ್ಯಾಹ್ನ 1.15ಕ್ಕೆ ಹುಲಕೋಟಿಯ ಕೃಷಿ ವಿಜ್ಞಾನ ಕೇಂದ್ರಕ್ಕೆ ಭೇಟಿ ನೀಡಲಿರುವ ಮುಖ್ಯಮಂತ್ರಿ ಅವರು ಕೃಷಿ ವಿಜ್ಞಾನಿಗಳೊಂದಿಗೆ ಮಹತ್ವದ ಸಭೆ ನಡೆಸಲಿದ್ದಾರೆ. ನಂತರ ಮಧ್ಯಾಹ್ನ 2.30ಕ್ಕೆ ಗದಗ ಜಿಲ್ಲೆಯ ಬರ ಪರಿಸ್ಥಿತಿ ಕುರಿತು ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳೊಂದಿಗೆ ಸಭೆ ಹಾಗೂ ಚರ್ಚೆ ನಡೆಸಲಿದ್ದಾರೆ. ಮಧ್ಯಾಹ್ನ 3.30ಕ್ಕೆ ಗದಗ ಜಿಲ್ಲಾಧಿಕಾರಿ ಕಚೇರಿ ಆವರಣದಿಂದ ಹೆಲಿಕಾಪ್ಟರ್ ಮೂಲಕ ಲಕ್ಷ್ಮೇಶ್ವರದ ಉಮಾ ಪಿಯು ಕಾಲೇಜು ಆವರಣಕ್ಕೆ ತೆರಳಲಿದ್ದಾರೆ. ಬಳಿಕ 3.50ಕ್ಕೆ ಶ್ರೀ ಮುಕ್ತಿ ಮಂದಿರಕ್ಕೆ ಭೇಟಿ ನೀಡಲಿರುವ ಮುಖ್ಯಮಂತ್ರಿ ಅವರು ನಂತರ ಲಕ್ಷ್ಮೇಶ್ವರಕ್ಕೆ ಆಗಮಿಸಲಿದ್ದಾರೆ.ಅಲ್ಲಿಂದ ಸಂಜೆ 4.30ಕ್ಕೆ ಹೆಲಿಕಾಪ್ಟರ್ ಮೂಲಕ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ತೆರಳಲಿದ್ದು, ಸಂಜೆ 5.05ಕ್ಕೆ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಇಂದು ಸಚಿವ ರಾಯರಡ್ಡಿ ಜಿಲ್ಲಾ ಪ್ರವಾಸ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಉನ್ನತ ಶಿಕ್ಷಣ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಬಸವರಾಜ ರಾಯರಡ್ಡಿ ಅವರು ಸೆಪ್ಟೆಂಬರ್ 1ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಅಂದು ಬೆಳಿಗ್ಗೆ 11 ಗಂಟೆಗೆ, ಗದಗ ಜಿಲ್ಲೆಯ ಬರ ಪರಿಸ್ಥಿತಿ ಕುರಿತು ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳೊಂದಿಗೆ ಜಿಲ್ಲಾಧಿ ಕಾರಿ ಸಭಾಂಗಣದಲ್ಲಿ ನಡೆಯಲಿರುವ ಮಹತ್ವದ ಸಭೆಯಲ್ಲಿ ಸಚಿವ ಬಸವರಾಜ ರಾಯರಡ್ಡಿ ಅವರು ಭಾಗವಹಿಸಲಿದ್ದಾರೆ. ಈ ಸಭೆಯಲ್ಲಿ ಸಿಎಂ ಡಿ.ಕೆ. ಶಿವಕುಮಾರ ಅವರು ಸಹ ಭಾಗವಹಿಸಲಿದ್ದು, ಜಿಲ್ಲೆ ಯ ಬರ ಪರಿಸ್ಥಿತಿ, ಕೈಗೊಂಡಿರುವ ಕ್ರಮಗಳು ಹಾಗೂ ಅಗತ್ಯ ಮುಂದಿನ ಕ್ರಮಗಳ ಕುರಿತು ಅಧಿಕಾ ರಿಗಳೊಂದಿಗೆ ಚರ್ಚೆ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

### ಚರಂಡಿ-ಸಿಮೆಂಟ್ ರಸ್ತೆ ನಿರ್ಮಾಣಕ್ಕೆ ಎಚ್.ಕೆ. ಪಾಟೀಲ ಭೂಮಿಪೂಜೆ

# ಮಂಜುನಾಥ ನಗರಕ್ಕೆ ₹1 ಕೋಟಿ ಮೂಲಸೌಕರ್ಯದ ಕೊಡುಗೆ



**ವಿಜಯಸಾಕ್ಷಿ ಸುದ್ದಿ, ಗದಗ**

ಬಡವರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಗದಗ–ಬೆಟಗೇರಿ ನಗರದ 4ನೇ ವಾರ್ಡ್‌ನ ಮಂಜುನಾಥ ನಗರದ ಜನರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸುವ ಕಾರ್ಯವನ್ನು ಸರ್ಕಾರ ಪ್ರಾಮಾಣಿಕವಾಗಿ ಕೈಗೊಂಡಿದ್ದು, ಜನರ ಅನುಕೂಲಕ್ಕಾಗಿ ಒಂದು ಕೋಟಿ ರೂ. ವೆಚ್ಚದಲ್ಲಿ ಸಿಮೆಂಟ್ ರಸ್ತೆಗಳು ಹಾಗೂ ರಸ್ತೆಯ ಎರಡೂ ಬದಿಗಳಲ್ಲಿ ಚರಂಡಿ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ ಎಂದು ಹಿರಿಯ ಶಾಸಕ ಎಚ್.ಕೆ. ಪಾಟೀಲ ಹೇಳಿದರು.

ಬೆಟಗೇರಿಯ 4ನೇ ವಾರ್ಡ್‌ನ ಮಂಜುನಾಥ ನಗರದಲ್ಲಿ ಲೆಕ್ಕ ಶೀರ್ಷಿಕೆ 8443 ಠೇವಣಿ ವಂತಿಕೆ 2025–26ನೇ ಸಾಲಿನ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ಒಂದು ಕೋಟಿ ರೂ. ವೆಚ್ಚದ ಚರಂಡಿ ಹಾಗೂ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಗದಗ–ಬೆಟಗೇರಿ ನಗರಸಭೆಯ ಸದಸ್ಯೆ ಶ್ರೀಮತಿ ಶಕುಂತಲಾ ಅಕ್ಕಿ ಅವರು ವಾರ್ಡ್‌ನ ಬಡ ಜನರಿಗೆ ಮೂಲಸೌಕರ್ಯ ಕಲ್ಪಿಸುವ ಉದ್ದೇಶದಿಂದ ನಗರಸಭೆಯಿಂದ ಹೆಚ್ಚುವ–ರಿಯಾಗಿ 27 ಲಕ್ಷ ರೂ. ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮುಂದಾಗಿರುವುದು, ತಮ್ಮ ವಾರ್ಡ್‌ನ ಜನತೆಯ ಮೇಲಿರುವ ಅವರ ಕಾಳಜಿಗೆ ಸಾಕ್ಷಿಯಾಗಿದೆ ಎಂದು ಎಚ್.ಕೆ. ಪಾಟೀಲ ಮೆಚ್ಚುಗೆ ವ್ಯಕ್ತಪಡಿಸಿದರು. ಹಲವು ರಸ್ತೆಗಳನ್ನು ನಿರ್ಮಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು. ಮುಂಬರುವ ಜನವರಿ ತಿಂಗಳೊಳಗೆ ಎಲ್ಲ ಕಾಮಗಾರಿಗಳು ಪೂರ್ಣಗೊಂಡು ಉದ್ಘಾಟನೆಯಾಗಬೇಕು ಹಾಗೂ ಜನರಿಗೆ ಅಗತ್ಯ ಸೌಲಭ್ಯಗಳು ದೊರೆಯುವಂತಾಗಬೇಕು ಎಂದು ಎಚ್.ಕೆ.ಪಾಟೀಲ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಾರ್ಡ್ ಸದಸ್ಯೆ ಶ್ರೀಮತಿ ಶಕುಂತಲಾ ಹೊಳಬಸಪ್ಪ ಅಕ್ಕಿ ಮಾತನಾಡಿದರು. ಮಂಜುನಾಥ ನಗರದ ಫಾರೂಕ್ ಮಸೀದಿಯಿಂದ ಗೌರಿಗಣೇಶ ಶಾಲೆಯವರೆಗೆ ಗುಣಮಟ್ಟದ ಸಿಮೆಂಟ್ ರಸ್ತೆ ಹಾಗೂ ರಸ್ತೆಯ ಎರಡೂ ಬದಿಗಳಲ್ಲಿ ಸಿ.ಸಿ. ಚರಂಡಿ ನಿರ್ಮಾಣ ಕೈಗೊಳ್ಳಲಾಗುತ್ತಿದೆ. ಇದರೊಂದಿಗೆ 348 ಮೀಟರ್ ಉದ್ದದ ಐದು ಸಿ.ಸಿ. ರಸ್ತೆಗಳು, 1,137 ಮೀಟರ್ ಉದ್ದದ ಸಿ.ಸಿ. ಚರಂಡಿಗಳು ಹಾಗೂ ಹೈಮಾಸ್ಟ್ ವಿದ್ಯುತ್ ದೀಪಗಳ ಅಳವಡಿಕೆ ಸೇರಿದಂತೆ ವಿವಿಧ ಕಾಮಗಾರಿಗಳು ನಡೆಯಲಿವೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಪ್ರಕಾಶ ವೆರ್ಣೇಕರ, ಶಂಕರಸಿಂಗ್ ರಜಪೂತ, ಹೀರಾಲಾಲಸಾ ಮೇರವಾಡೆ, ಶಿವಯ್ಯ ಶಿವಪ್ಪಯ್ಯಮಠ, ಸೂರಜ್ ಜಮಾದಾರ, ಮಹ್ಮದ ಶಾಲಗಾರ, ಶೇಡುಸಿಂಗ್ ಜಮಾದಾರ ಹಾಗೂ ಬಸವರಾಜ ಕುಂದಗೋಳ ಪಾಲ್ಗೊಂಡಿದ್ದರು. ಸಿದ್ದಣ್ಣ ಮೇಳನವರ ಸ್ವಾಗತಿಸಿದರು. ವಾಸುದೇವ ಹುಣಸಿಮರದ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಹೊಳಬಸಪ್ಪ ಅಕ್ಕಿ, ಸುದೀಪ ಕಣವಿ, ಹುಲ್ಲೇಶ ಬಜಂತ್ರಿ, ನಿಂಗಪ್ಪ ಕರಮುಡಿ ಸೇರಿದಂತೆ ಗಣ್ಯರು, ಈ ಭಾಗದ ನಾಗರಿಕರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

> ಬಡವರು ವಾಸಿಸುವ ಪ್ರದೇಶಗಳಿಗೂ ಗುಣಮಟ್ಟದ ಮೂಲಸೌಕರ್ಯ ಒದಗಿಸುವುದು ಸರ್ಕಾರದ ಆದ್ಯತೆಯಾಗಿದೆ. ಮಂಜುನಾಥ ನಗರದಲ್ಲಿ ಆರಂಭವಾಗಿರುವ ರಸ್ತೆ ಮತ್ತು ಚರಂಡಿ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ ಜನರಿಗೆ ಅನುಕೂಲ ಕಲ್ಪಿಸಬೇಕು.
>
> - ಎಚ್.ಕೆ. ಪಾಟೀಲ, ಶಾಸಕ

### ಲಕ್ಷ್ಮೇಶ್ವರ ಬರಪಟ್ಟಿಯಿಂದ ಹೊರಕ್ಕೆ: ಇಂದು ಸಿಎಂ ಭೇಟಿ ಮೇಲೆ ಅನ್ನದಾತರ ಭಾರಿ ನಿರೀಕ್ಷೆ

# ಒಣಗಿದ ಹೊಲ... ಮುಗಿಲಿನತ್ತ ರೈತನ ಚಿತ್ತ!



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಒಂದೆಡೆ ಕಣ್ಣೆದುರೇ ಒಣಗುತ್ತಿರುವ ಬೆಳೆ, ಮತ್ತೊಂದೆಡೆ ತೀರಿಸಲಾಗದ ಸಾಲದ ಹೊರೆ... ಮಳೆಗಾಗಿ ಆಗಸದತ್ತ ಮುಖ ಮಾಡುತ್ತಿರುವ ಲಕ್ಷ್ಮೇಶ್ವರ ತಾಲೂಕಿನ ಅನ್ನದಾತನ ಕಣ್ಣಲ್ಲಿ ಈಗ ಆತಂಕದೊಂದಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ಭೇಟಿ ಹೊಸ ನಿರೀಕ್ಷೆ ಮೂಡಿಸಿದೆ.

ತೀವ್ರ ಬರದ ವಾತಾವರಣದ ನಡುವೆಯೂ ಲಕ್ಷ್ಮೇಶ್ವರ ತಾಲೂಕು ಬರಪೀಡಿತ ತಾಲೂಕುಗಳ ಪಟ್ಟಿಯಿಂದ ಹೊರಗುಳಿದಿದೆ. ಇಂದು ಸೆಪ್ಟೆಂಬರ್ 1ರಂದು ಸಿಎಂ ಬರ ಪರಿಸ್ಥಿತಿ ವೀಕ್ಷಣೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ, ಅಧಿಕಾರಿಗಳ ಕಡತಗಳ ಅಂಕಿ–ಅಂಶಗಳ ಬದಲು ಒಣಗಿದ ಹೊಲಗಳಿಗೆ ತೆರಳಿ ರೈತರ ನೈಜ ಸಂಕಷ್ಟ ಅರಿಯಬೇಕೆಂಬ ಒತ್ತಾಯ ಕೇಳಿಬಂದಿದೆ.

ಮುಂಗಾರಿನುದ್ದಕ್ಕೂ ಸಮರ್ಪಕ ಮಳೆಯಾಗದ ಪರಿಣಾಮ ಮೆಕ್ಕೆಜೋಳ, ಶೇಂಗಾ, ಹತ್ತಿ, ಈರುಳ್ಳಿ, ಮೆಣಸಿನಕಾಯಿ ಸೇರಿದಂತೆ ಹಲವು ಬೆಳೆಗಳು ಒಣಗುತ್ತಿವೆ. ಜುಲೈನಲ್ಲಿ ಸುರಿದ ಅಲ್ಪಸ್ವಲ್ಪ ಮಳೆಯಿಂದ ಹೆಸರು ಬೆಳೆಗೆ ಮಾತ್ರ ಅತ್ಯಲ್ಪ ಇಳುವರಿ ದೊರೆತಿದೆ ಎನ್ನಲಾಗಿದೆ.

ಕೃಷಿ ಇಲಾಖೆಯ ಮಾಹಿತಿ ಪ್ರಕಾರ 34,866 ಹೆಕ್ಟೇರ್ ಬಿತ್ತನೆ ಗುರಿಯ ಪೈಕಿ 32,920 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಇದರಲ್ಲಿ 22,050 ಹೆಕ್ಟೇರ್ ಮೆಕ್ಕೆಜೋಳ, 6,150 ಹೆಕ್ಟೇರ್ ಹೆಸರು, 3,000 ಹೆಕ್ಟೇರ್ ಶೇಂಗಾ, 1,500 ಹೆಕ್ಟೇರ್ ಹತ್ತಿ ಹಾಗೂ 220 ಹೆಕ್ಟೇರ್ ತೊಗರಿ ಬೆಳೆಯಲಾಗಿದೆ.



ಕೆಎಸ್‌ಎನ್‌ಡಿಎಂಸಿ ವರದಿಯಲ್ಲಿ ಶೇ.21ರಷ್ಟು ಮಾತ್ರ ಮಳೆ ಕೊರತೆ ದಾಖಲಾಗಿರುವುದು ಬರ ಘೋಷಣೆಗೆ ಅಡ್ಡಿಯಾಗಿದೆ ಎನ್ನಲಾಗುತ್ತಿದೆ. ಆದರೆ ಕೃಷಿ ಇಲಾಖೆಯು ಈಗಾಗಲೇ ಶೇ.50ರಷ್ಟು ಬೆಳೆಹಾನಿ ವರದಿ ಸಲ್ಲಿಸಿರುವುದು ರೈತರ ಪ್ರಶ್ನೆಯನ್ನು ಮತ್ತಷ್ಟು ಗಂಭೀರಗೊಳಿಸಿದೆ.

ಬಟ್ಟೂರ, ಸೂರಣಗಿ, ಬಾಲೆಹೊಸೂರು, ಹರದಗಟ್ಟಿ, ಆದ್ರಳ್ಳಿ, ದೊಡ್ಡೂರು, ಯಲ್ಲಾಪುರ ಸೇರಿದಂತೆ ಹಲವು ಗ್ರಾಮಗಳಲ್ಲಿ ಬೆಳೆಗಳು ಒಣಗಿ ನಿಂತಿವೆ. ಗದಗ ಜಿಲ್ಲೆಯಲ್ಲಿ ಗಜೇಂದ್ರಗಡ ತಾಲೂಕು ಹೊರತುಪಡಿಸಿ ಲಕ್ಷ್ಮೇಶ್ವರ ಸೇರಿದಂತೆ ಉಳಿದ ತಾಲೂಕುಗಳು ಬರಪಟ್ಟಿಯಿಂದ ಹೊರಗುಳಿದಿವೆ. ಸಿಎಂ ಭೇಟಿ ಕಾಟಾಚಾರದ ಬರ ವೀಕ್ಷಣೆಯಾಗಲಿದೆಯೇ ಅಥವಾ ಲಕ್ಷ್ಮೇಶ್ವರವನ್ನು ಬರಪೀಡಿತ ಪಟ್ಟಿಗೆ ಸೇರಿಸುವ ಮಹತ್ವದ ನಿರ್ಧಾರಕ್ಕೆ ನಾಂದಿಯಾಗಲಿದೆಯೇ ಎಂಬುದನ್ನು ಅನ್ನದಾತರು ನಿರೀಕ್ಷೆಯಿಂದ ಕಾಯುತ್ತಿದ್ದಾರೆ.

> ಲಕ್ಷ್ಮೇಶ್ವರ ಮತ್ತು ಶಿರಹಟ್ಟಿ ತಾಲೂಕುಗಳ ಬಿತ್ತನೆ ಕ್ಷೇತ್ರ ಹಾಗೂ ಬೆಳೆಹಾನಿ ಪ್ರಮಾಣದ ವರದಿಯನ್ನು ಈಗಾಗಲೇ ಸಲ್ಲಿಸಲಾಗಿದೆ. ಮುಖ್ಯಮಂತ್ರಿ ಭೇಟಿ ವೇಳೆ ತಾಲೂಕಿನ ಬರ ಪರಿಸ್ಥಿತಿ ಮತ್ತು ರೈತರ ಸಂಕಷ್ಟದ ಕುರಿತು ಸಮಗ್ರ ಮಾಹಿತಿ ನೀಡಲು ಅಗತ್ಯ ಪೂರ್ವಸಿದ್ಧತೆ ಮಾಡಿಕೊಂಡಿದ್ದೇವೆ.
>
> -ಶಿವಕುಮಾರ ಕಾಶಪ್ಪನವರ, ಸಹಾಯಕ ಕೃಷಿ ನಿರ್ದೇಶಕರು

> ಸಿಎಂ ಬರ ವೀಕ್ಷಣೆ ಕೇವಲ ಕಡತಗಳ ಪರಿಶೀಲನೆಯಾಗದೆ, ರೈತರ ಹೊಲದಲ್ಲಿನ ವಾಸ್ತವ ಸ್ಥಿತಿಯ ವೀಕ್ಷಣೆಯಾಗಬೇಕು. ಲಕ್ಷ್ಮೇಶ್ವರವನ್ನು ಬರಪೀಡಿತ ಪಟ್ಟಿಗೆ ಸೇರಿಸಿ ಬೆಳೆನಷ್ಟ ಪರಿಹಾರ, ಬೆಳೆವಿಮೆ ಸೇರಿದಂತೆ ಅಗತ್ಯ ಸೌಲಭ್ಯ ಕಲ್ಪಿಸಬೇಕು. ಕಾಟಾಚಾರದ ಭೇಟಿ ನಡೆದರೆ ರೈತ ಸಮುದಾಯ ಹೋರಾಟಕ್ಕೆ ಇಳಿಯಲಿದೆ.
>
> - ಮಂಜುನಾಥ ಮಾಗಡಿ, ಅಧ್ಯಕ್ಷರು, ಸಮಗ್ರ ರೈತ ಸಂಘಟನೆಗಳ ಒಕ್ಕೂಟ

# ಅಂತಾರಾಷ್ಟ್ರೀಯ ನ್ಯಾಯಾಧೀಶ ಲಿಯೋನಾರ್ಡೋ ಬ್ರಾಂಟ್‌ಗೆ ಜಿ.ಎಸ್. ಪಾಟೀಲ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಹೇಗ್‌ನ ಅಂತಾರಾಷ್ಟ್ರೀಯ ನ್ಯಾಯಾಲಯದ ಪ್ರಮುಖ ನ್ಯಾಯಾಧೀಶ ಲಿಯೋನಾರ್ಡೋ ಬ್ರಾಂಟ್ ಅವರು ಶನಿವಾರ ವಿಧಾನಸೌಧಕ್ಕೆ ಭೇಟಿ ನೀಡಿ, ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಅವರನ್ನು ಭೇಟಿಯಾದರು. ವಿಧಾನಸೌಧದಲ್ಲಿರುವ ತಮ್ಮ ಅಧಿಕೃತ ಕಚೇರಿಯಲ್ಲಿ ಸಭಾಧ್ಯಕ್ಷ ಜಿ.ಎಸ್. ಪಾಟೀಲ ಅವರು ನ್ಯಾಯಾಧೀಶ ಲಿಯೋನಾರ್ಡೋ ಬ್ರಾಂಟ್ ಅವರನ್ನು ಆತ್ಮೀಯವಾಗಿ ಬರಮಾಡಿಕೊಂಡರು. ಈ ವೇಳೆ ಉಭಯ ಗಣ್ಯರ ನಡುವೆ ವಿವಿಧ ವಿಷಯಗಳ ಕುರಿತು ವಿಚಾರ ವಿನಿಮಯ ನಡೆಯಿತು.

# ಗದಗ ಎಪಿಎಂಸಿ ಆವರಣದಲ್ಲಿ ಗಜಸ್ತಂಭ ಪ್ರತಿಷ್ಠಾಪನೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಪ್ರಾಂಗಣದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿಯಿಂದ ಶುಕ್ರವಾರ ಬೆಳಗ್ಗೆ ಗಣೇಶೋತ್ಸವದ ಪೂರ್ವಭಾವಿಯಾಗಿ ಗಜಸ್ತಂಭ ಪ್ರತಿಷ್ಠಾಪನೆ ಕಾರ್ಯಕ್ರಮವನ್ನು ಶಾಸ್ತ್ರೋಕ್ತವಾಗಿ ನೆರವೇರಿಸಲಾಯಿತು.

ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿಯ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಭಾದ್ರಪದ ಮಾಸದ ಶುಕ್ಲ ಪಕ್ಷದ ಚತುರ್ಥಿಯಂದು ಆಚರಿಸಲಾಗುವ ಗಣೇಶ ಚತುರ್ಥಿ ಉತ್ಸವದ ಹಿನ್ನೆಲೆಯಲ್ಲಿ ಮಂಟಪ ನಿರ್ಮಾಣ ಹಾಗೂ ವಿವಿಧ ಉತ್ಸವ ಸಿದ್ಧತೆಗಳಿಗೆ ಅಧಿಕೃತ ಚಾಲನೆ ನೀಡುವ ಉದ್ದೇಶದಿಂದ ಗಜಸ್ತಂಭ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಗಜಸ್ತಂಭ ಪ್ರತಿಷ್ಠಾಪನೆಯು ಗಣೇಶೋತ್ಸವ ಆಚರಣೆಯ ಮೊದಲ ಹಾಗೂ ಪ್ರಮುಖ ಪೂರ್ವಭಾವಿ ಧಾರ್ಮಿಕ ವಿಧಿಯಾಗಿದೆ. ಗಜಸ್ತಂಭ ನೆಡುವ ಮುನ್ನ ಗಣಪತಿ ಪೂಜೆ, ಭೂಮಿ ಪೂಜೆ ಹಾಗೂ ವಾಸ್ತು ಪೂಜೆಗಳನ್ನು ನೆರವೇರಿಸಲಾಯಿತು. ಬಳಿಕ ಧ್ವಜಸ್ತಂಭಕ್ಕೆ ಅರಿಶಿನ, ಕುಂಕುಮ, ಗಂಧ ಹಾಗೂ ಹೂವುಗಳಿಂದ ಅಲಂಕಾರ ಮಾಡಿ ಧಾರ್ಮಿಕ ವಿಧಿವಿಧಾನಗಳೊಂದಿಗೆ ಪ್ರತಿಷ್ಠಾಪಿಸಲಾಯಿತು.

ಗಜಸ್ತಂಭ ಪ್ರತಿಷ್ಠಾಪನೆಯೊಂದಿಗೆ ಉತ್ಸವ ನಡೆಯುವ ಸ್ಥಳದಲ್ಲಿ ಸಾರ್ವಜನಿಕ ಮಂಟಪ ನಿರ್ಮಾಣ ಕಾರ್ಯಗಳಿಗೆ ಅಧಿಕೃತ ಚಾಲನೆ ದೊರೆಯುಲಿದೆ. ಉತ್ಸವದ ಆರಂಭದಿಂದ ಗಣೇಶ ಮೂರ್ತಿ ವಿಸರ್ಜನೆಯವರೆಗೆ ಯಾವುದೇ ಅಡೆತಡೆ ಅಥವಾ ವಿಘ್ನಗಳು ಎದುರಾಗದೆ ಎಲ್ಲ ಕಾರ್ಯಕ್ರಮಗಳು ಯಶಸ್ವಿಯಾಗಿ ನೆರವೇರಲಿ ಎಂದು ವಿಘ್ನನಿವಾರಕ ಗಣಪತಿಗೆ ಪ್ರಾರ್ಥಿಸಲಾಯಿತು ಎಂದು ಅವರು ಹೇಳಿದರು.

ಈ ಧಾರ್ಮಿಕ ವಿಧಿಯಲ್ಲಿ ಸಮಿತಿಯ ಪ್ರಮುಖರು, ಸದಸ್ಯರು ಹಾಗೂ ಭಕ್ತಾದಿಗಳು ಪಾಲ್ಗೊಂಡು ಗಣೇಶೋತ್ಸವದ ಯಶಸ್ಸಿಗೆ ಸಂಕಲ್ಪ ಮಾಡಿದರು.

ಈ ಸಂದರ್ಭದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿಯ ಗೌರವಾಧ್ಯಕ್ಷ ಪ್ರಮೋದ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಉಪಾಧ್ಯಕ್ಷ ರಾಜು ಎನ್. ಮೂಲೀಮನಿ, ಸಹಕಾರ್ಯದರ್ಶಿ ಚಂದ್ರಕಾಂತ ಬಿ. ಸವದತ್ತಿ, ಖಜಾಂಚಿ ಮಹೇಶ ಜಿ. ಗಾಣಿಗೇರ, ವಿನಾಯಕ ಪಿ. ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಈ. ಬಾಳಿಕಾಯ, ಗಿರೀಶ ವಿ. ಅಳವಂಡಿ, ದಯಾನಂದ ದುಂಡಪ್ಪನವರ, ವಿನಾಯಕ ವಿ. ಕಾಡಪ್ಪನವರ, ಮುರಗೇಶ ಬಡ್ನಿ, ಅಜೀತ್ ಪುಣೇಕರ, ವಿನೂತ್ ಕವಲೂರ, ಶಿವಾನಂದ ನಾಗಠಾಣ, ಮಂಜುನಾಥ ಬೇಲೆರಿ, ಅಶೋಕ ಪಾಟೀಲ, ಅಶೋಕ ಗಡಾದ, ಈರಣ್ಣ ಕಾಡಪ್ಪನವರ, ಸಾಗರ ವಜ್ರೇಶ್ವರಿ ಹಾಗೂ ಬಸವರಾಜ ಹರ್ತಿ ಸೇರಿದಂತೆ ದಲಾಲ ವರ್ತಕರ ಸಂಘ ಮತ್ತು ಖರೀದಿ ವರ್ತಕರ ಸಂಘದ ಸರ್ವ ಸದಸ್ಯರು ಉಪಸ್ಥಿತರಿದ್ದರು.

## ಈದ್ ಮಿಲಾದ್ ಅಂಗವಾಗಿ ವಿದ್ಯಾರ್ಥಿಗಳಿಗೆ
# ಶೈಕ್ಷಣಿಕ ಸಾಮಗ್ರಿ ವಿತರಣೆ



**ವಿಜಯಸಾಕ್ಷಿ ಸುದ್ದಿ, ರೋಣ**

ಈದ್ ಮಿಲಾದ್ ಹಬ್ಬದ ಪ್ರಯುಕ್ತ ಪ್ರವಾದಿ ಹಜರತ್ ಮೊಹಮ್ಮದ್ ಪೈಗಂಬರ್ (ಸ.ಅ.) ಅವರ ಜಯಂತ್ಯುತ್ಸವದ ಅಂಗವಾಗಿ ಯುವ ಕರ್ನಾಟಕ ವೇದಿಕೆ ಹಾಗೂ ಈದ್ ಮಿಲಾದ್ ಕಮಿಟಿ ವತಿಯಿಂದ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಶೈಕ್ಷಣಿಕ ಸಾಮಗ್ರಿಗಳನ್ನು ವಿತರಿಸಲಾಯಿತು.

ಯುವ ಕರ್ನಾಟಕ ವೇದಿಕೆ ಗದಗ ಜಿಲ್ಲಾ ಅಧ್ಯಕ್ಷ ಎಂ.ಎಚ್. ನದಾಫ್, ಈದ್ ಮಿಲಾದ್ ಕಮಿಟಿ ಅಧ್ಯಕ್ಷ ಎಫ್.ಎಸ್. ಚಿಕ್ಕಮಣ್ಣೂರ್ ಹಾಗೂ ಬಸವರಾಜ ಹಾದಿಮನಿ ಅವರ ನೇತೃತ್ವದಲ್ಲಿ ಹೊಳೆಆಲೂರಿನ ಬಾಲಕಿಯರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಬಾಲಕರ ಸರ್ಕಾರಿ ಮಾದರಿ ಕೇಂದ್ರ ಶಾಲೆ ಹಾಗೂ ಸರ್ಕಾರಿ ಉರ್ದು ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಪೆನ್ನು, ನೋಟ್‌ಪುಸ್ತಕ ಹಾಗೂ ಅಂಕಲಿಪಿಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಯುಚ್ಚರೇಶ್ವರ ಸ್ವಾಮೀಜಿಯವರ ಆಶೀರ್ವಾದದೊಂದಿಗೆ ಶೈಕ್ಷಣಿಕ ಸಾಮಗ್ರಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ ಗಿರಿತಿಮ್ಮಣ್ಣವರ ಮಾತನಾಡಿ, ಶಿಕ್ಷಣವು ಹುಲಿಯ ಹಾಲಿನಂತಿದ್ದು, ಅದನ್ನು ಕುಡಿದವನು ಘರ್ಜಿಸಲೇಬೇಕು. ವಿದ್ಯಾರ್ಥಿಗಳು ತಂದೆ-ತಾಯಿಯ ಮಾತುಗಳನ್ನು ಪಾಲಿಸುತ್ತಾ, ದುಶ್ಚಟಗಳಿಂದ ದೂರವಿದ್ದು, ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ ದೇಶಕ್ಕೆ ಮಾದರಿಯಾಗಬೇಕು ಎಂದು ಕರೆ ನೀಡಿದರು.

> ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರ ಶಾಂತಿ, ಸಹೋದರತ್ವ ಮತ್ತು ಮಾನವೀಯತೆಯ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ಈದ್ ಮಿಲಾದ್ ಆಚರಣೆಯ ನಿಜವಾದ ಅರ್ಥವಾಗಿದೆ.
> - ಬಸವರಾಜ ಗಿರಿತಿಮ್ಮಣ್ಣವರ, ಪಿಡಿಒ

ಈದ್ ಮಿಲಾದ್ ಹಬ್ಬವು ಜಗತ್ತಿಗೆ ಶಾಂತಿಯ ಸಂದೇಶ ಸಾರುವ ಮಹತ್ವದ ಹಬ್ಬವಾಗಿದೆ. ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರು ಸರ್ವ ಜನಾಂಗದವರಲ್ಲಿ ಭಾವೈಕ್ಯತೆ, ಸಹೋದರತ್ವ ಹಾಗೂ ಶಾಂತಿಯ ಸಂದೇಶ ಸಾರಿದ ಮಹಾನ್ ವ್ಯಕ್ತಿಯಾಗಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಯುವ ಮುಖಂಡ ಜಗದೀಶ್ ಬ್ಯಾಡಗಿ, ಶಾಲೆಯ ಮುಖ್ಯೋಪಾಧ್ಯಾಯ ರಾಮನಗೌಡ ಹುಲ್ಲೂರು, ಉದ್ಯಮಿಗಳಾದ ಬಾಬುಸಾಬ್ ಕಲೆಗಾರ, ವಾಸುದೇವ್ ಪವಾರ್, ಎಸ್‌ಕೆಎಂಪಿ ಹೈಸ್ಕೂಲ್ ಮುಖ್ಯೋಪಾಧ್ಯಾಯ ಎ.ಎನ್. ನದಾಫ್, ಮುರ್ತುಜಾ ಗೌಂಡಿ, ಅಲ್ತಾಫ್ ಮುಲ್ಲಾ, ಸಾಧಿಕ್ ಆದ್ವಾನಿ, ಹುಸೇನ್ ಟೆಕ್ಕೆದ, ಸತೀಶ್ ತಂಬ್ರಹಳ್ಳಿ, ಮುನ್ನಾ ಕೊತಬಾಳ, ರಾಜು ಹೊಂಬಾಳ, ರಫೀಕ್ ಆದ್ವಾನಿ, ನಯೀಮ್ ನದಾಫ್, ಅಮೀರುದ್ದೀನ್ ಮುಲ್ಲಾ, ಪ್ರವೀಣ್ ಕರುಗಲ್ ಹಾಗೂ ಮುಜಮಿಲ್ ಬೇಪಾರಿ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಮತ್ತು ಮುಖಂಡರು ಉಪಸ್ಥಿತರಿದ್ದರು.

## ಸೆ.15ರವರೆಗೆ ತಾಲೂಕಿನಾದ್ಯಂತ ಮನೆ-ಮನೆ ವಿಶೇಷ ಜಾಗೃತಿ ಅಭಿಯಾನ
# 27 ಗ್ರಾಪಂಗಳಲ್ಲಿ ಜಾಬ್‌ಕಾರ್ಡ್ ಮೇಳ





**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮೀಣ ಪ್ರದೇಶದ ಕೂಲಿಕಾರ್ಮಿಕರಿಗೆ ಸ್ಥಳೀಯವಾಗಿಯೇ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ವಿಬಿ ಜಿ ರಾಮ್ ಜಿ ಯೋಜನೆಯಡಿ ತಾಲೂಕಿನ 27 ಗ್ರಾಮ ಪಂಚಾಯಿತಿಗಳಲ್ಲಿ ಜಾಬ್‌ಕಾರ್ಡ್ ಮೇಳ ಹಾಗೂ ವಿಶೇಷ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಚ್.ಎಸ್. ಜನಗಿ ತಿಳಿಸಿದ್ದಾರೆ.

ಸೆಪ್ಟೆಂಬರ್ 15ರವರೆಗೆ ತಾಲೂಕಿನಾದ್ಯಂತ ಜಾಬ್‌ಕಾರ್ಡ್ ಮೇಳ ಹಾಗೂ ಮನೆ-ಮನೆ ಭೇಟಿ ಮೂಲಕ ವಿಶೇಷ ಜಾಗೃತಿ ಕಾರ್ಯಕ್ರಮ ನಡೆಯಲಿದೆ ಎಂದು ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾಮೀಣ ಪ್ರದೇಶದಲ್ಲಿ ಕೃಷಿ ಚಟುವಟಿಕೆಗಳು ಕಡಿಮೆಯಾಗಿರುವ ಸಂದರ್ಭದಲ್ಲಿ ಸ್ಥಳೀಯ ಮಟ್ಟದಲ್ಲಿಯೇ ಉದ್ಯೋಗ ಕಲ್ಪಿಸುವುದು ಪ್ರಮುಖ ಆದ್ಯತೆಯಾಗಿದೆ. ವಿಬಿ ಜಿ ರಾಮ್ ಜಿ ಯೋಜನೆಯಡಿ ಅರ್ಹ ಗ್ರಾಮೀಣ ಕುಟುಂಬಗಳಿಗೆ ಲಭ್ಯವಿರುವ ವಿವಿಧ ಕಾಮಗಾರಿಗಳು ಹಾಗೂ ಉದ್ಯೋಗಾವಕಾಶಗಳ ಕುರಿತು ಸಮಗ್ರ ಮಾಹಿತಿ ನೀಡಲಾಗುವುದು ಎಂದರು.

ಜಾಬ್‌ಕಾರ್ಡ್ ಹೊಂದಿರುವವರು ಹಾಗೂ ಹೊಸದಾಗಿ ಜಾಬ್‌ಕಾರ್ಡ್ ಪಡೆಯಲು ಅರ್ಹರಾಗಿರುವ ಕುಟುಂಬಗಳನ್ನು ಗುರುತಿಸಿ, ಯೋಜನೆಯಡಿ ಉದ್ಯೋಗಕ್ಕಾಗಿ ಬೇಡಿಕೆ ಸಲ್ಲಿಸುವಂತೆ ಪ್ರೇರೇಪಿಸಲಾಗುವುದು. ಗ್ರಾಮದಲ್ಲಿಯೇ ಉದ್ಯೋಗ ದೊರೆಯುವುದರಿಂದ ಗ್ರಾಮೀಣ ಜನರು ಉದ್ಯೋಗ ಅರಸಿ ನಗರ ಪ್ರದೇಶಗಳಿಗೆ ವಲಸೆ ಹೋಗುವುದನ್ನು ತಡೆಯಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

> ಬರ ಪರಿಸ್ಥಿತಿಯಿಂದ ಗ್ರಾಮೀಣ ಭಾಗದಲ್ಲಿ ಕೃಷಿ ಕೆಲಸದ ಅವಕಾಶಗಳು ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಜಾಬ್‌ಕಾರ್ಡ್ ಮೇಳ ಮಹತ್ವ ಪಡೆದಿದೆ. ಗ್ರಾಮದಲ್ಲಿಯೇ ಕೂಲಿ ಕೆಲಸ ದೊರೆಯುವುದರಿಂದ ಉದ್ಯೋಗ ಅರಸಿ ನಗರ ಪ್ರದೇಶಗಳಿಗೆ ವಲಸೆ ಹೋಗುವ ಪರಿಸ್ಥಿತಿ ತಪ್ಪಲಿದೆ. ಜಾಬ್‌ಕಾರ್ಡ್ ಹೊಂದಿರುವವರು ಇ-ಕೆವೈಸಿ ಪೂರ್ಣಗೊಳಿಸಿ ಲಭ್ಯವಿರುವ ಉದ್ಯೋಗಾವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಈ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಗ್ರಾಮ ಪಂಚಾಯಿತಿ ಸ್ವಚ್ಛ ವಾಹಿನಿ ಪ್ರಚಾರ ಸೇರಿದಂತೆ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.
> - ಕುಮಾರ ಪುಜಾರ, ಸಹಾಯಕ ನಿರ್ದೇಶಕರು, ವಿಬಿ ಜಿ ರಾಮ್ ಜಿ ಯೋಜನೆ, ತಾಲೂಕು ಪಂಚಾಯಿತಿ, ಗದಗ

ಪ್ರತಿಯೊಂದು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರ್ಮಿಕರನ್ನು ಯೋಜನೆಯಡಿ ತೊಡಗಿಸಿಕೊಂಡು ನಿರಂತರ ಉದ್ಯೋಗ ಒದಗಿಸಲು ಆದ್ಯತೆ ನೀಡಲಾಗಿದೆ. ಈಗಾಗಲೇ ತಾಲೂಕಿನ ಎಲ್ಲ 27 ಗ್ರಾಮ ಪಂಚಾಯಿತಿಗಳಲ್ಲಿ ಜಾಬ್‌ಕಾರ್ಡ್ ಮೇಳ ಪ್ರಗತಿಯಲ್ಲಿದ್ದು, ಗ್ರಾಮೀಣ ಕುಟುಂಬಗಳಿಗೆ ಯೋಜನೆಯ ಕುರಿತು ಸಮಗ್ರ ಮಾಹಿತಿ ನೀಡಲು ವಿಶೇಷ ಜಾಗೃತಿ ಅಭಿಯಾನ ನಡೆಸಲಾಗುತ್ತಿದೆ ಎಂದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮ ಕಾಯಕ ಮಿತ್ರರು, ಬಿಎಫ್‌ಟಿ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಮನೆ-ಮನೆಗೆ ಭೇಟಿ ನೀಡಿ ಅರ್ಹ ಫಲಾನುಭವಿಗಳನ್ನು ಗುರುತಿಸಲಿದ್ದಾರೆ.

ಉದ್ಯೋಗ ಬೇಡಿಕೆ ಸಂಗ್ರಹಿಸುವುದು ಹಾಗೂ ಯೋಜನೆಯಡಿ ಲಭ್ಯವಿರುವ ವಿವಿಧ ಕಾಮಗಾರಿಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ.

ಈ ಕಾರ್ಯದ ಸಮರ್ಪಕ ಅನುಷ್ಠಾನಕ್ಕಾಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮೇಲ್ವಿಚಾರಣೆ ನಡೆಸುವಂತೆ ಸೂಚಿಸಲಾಗಿದೆ ಎಂದು ಡಾ. ಜನಗಿ ತಿಳಿಸಿದ್ದಾರೆ.

ಗ್ರಾಮೀಣ ಕುಟುಂಬಗಳಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವುದರ ಜತೆಗೆ ಹೆಚ್ಚಿನ ಮಾನವ ದಿನಗಳನ್ನು ಸೃಜಿಸುವುದು ಜಾಬ್‌ಕಾರ್ಡ್ ಮೇಳದ ಪ್ರಮುಖ ಉದ್ದೇಶವಾಗಿದೆ. ಯೋಜನೆಯ ಸೌಲಭ್ಯವನ್ನು ಪ್ರತಿಯೊಬ್ಬ ಅರ್ಹ ಕೂಲಿಕಾರ್ಮಿಕರೂ ಪಡೆದುಕೊಳ್ಳುವಂತೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವ್ಯಾಪಕ ಪ್ರಚಾರ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

> ಜಾಬ್‌ಕಾರ್ಡ್ ಹೊಂದಿರುವ ಹಾಗೂ ಇ-ಕೆವೈಸಿ ಪೂರ್ಣಗೊಳಿಸಿರುವ ಪ್ರತಿಯೊಬ್ಬ ಅರ್ಹ ಕೂಲಿಕಾರ್ಮಿಕರೂ ಯೋಜನೆಯ ಪ್ರಯೋಜನ ಪಡೆದುಕೊಳ್ಳಬೇಕು. ಗ್ರಾಮ ಪಂಚಾಯಿತಿಗಳ ಮೂಲಕ ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗ ಸೃಷ್ಟಿಸಿ, ಗ್ರಾಮೀಣ ಕುಟುಂಬಗಳಿಗೆ ಆದಾಯದ ಭದ್ರತೆ ಒದಗಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.
> -ಡಾ. ಎಚ್.ಎಸ್. ಜನಗಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯಿತಿ, ಗದಗ

## ಕೊರಮ ಸಮಾಜದಿಂದ ಭವ್ಯ ಪೂಜೆ, ರಥೋತ್ಸವದೊಂದಿಗೆ ಮೆರವಣಿಗೆ
# ಭಕ್ತಿ-ಸಡಗರದಲ್ಲಿ ನುಲಿಯ ಚಂದಯ್ಯ ಜಯಂತಿ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಬೆಟಗೇರಿಯ ಗಾಂಧಿನಗರ (ಸೆಟ್ಲಮೆಂಟ್) ವಸಾಹತಿಯಲ್ಲಿ ಶರಣ ಶ್ರೀ ನುಲಿಯ ಚಂದಯ್ಯ ಕೊರಮ ಸಮಾಜ ಕ್ಷೇಮಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸಂಘ ಮತ್ತು ಕೊರಮ ಸಮಾಜ ಹವ್ಯಾಸಿ ಸಂಘಗಳ ಜಂಟಿ ಸಹಯೋಗದಲ್ಲಿ ಕೊರಮ ಸಮಾಜದ ಕುಲಗುರುಗಳಾದ ಶರಣ ಶ್ರೀ ನುಲಿಯ ಚಂದಯ್ಯನವರ 919ನೇ ಜಯಂತಿಯನ್ನು ಭಕ್ತಿ, ಶ್ರದ್ಧೆ ಹಾಗೂ ಸಡಗರದಿಂದ ಆಚರಿಸಲಾಯಿತು.

ಗಾಂಧಿನಗರದ ಕೊರಮ ಭವನದಲ್ಲಿ ಬೆಳಗ್ಗೆಯೇ ಶರಣ ಶ್ರೀ ನುಲಿಯ ಚಂದಯ್ಯನವರ ಭಾವಚಿತ್ರವನ್ನು ಹೂವಿನ ಮಾಲೆ ಹಾಗೂ ಪುಷ್ಪಗಳಿಂದ ಅಲಂಕರಿಸಲಾಯಿತು.

ಭವನದ ಒಳಗೆ ಮತ್ತು ಹೊರಗೆ ಬಣ್ಣಬಣ್ಣದ ರಂಗೋಲಿ, ತಳಿರು ತೋರಣ, ತೆಂಗು-ಬಾಳೆ ಗಿಡಗಳ ಅಲಂಕಾರ ಹಾಗೂ ಆಕರ್ಷಕ ಪೆಂಡಾಲ್ ನಿರ್ಮಿಸುವ ಮೂಲಕ ಜಯಂತ್ಯೋತ್ಸವಕ್ಕೆ ವಿಶೇಷ ಮೆರುಗು ನೀಡಲಾಗಿತ್ತು.

ಶರಣ ಶ್ರೀ ನುಲಿಯ ಚಂದಯ್ಯನವರ ಭಾವಚಿತ್ರಕ್ಕೆ ಅರಿಶಿನ-ಕುಂಕುಮ, ಫಲ-ಪುಷ್ಪ, ನೈವೇದ್ಯ, ಅಕ್ಷತೆ ಹಾಗೂ ಮಂಗಳಾರತಿಯೊಂದಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

ನುಲಿಯ ಚಂದಯ್ಯ ಸಂಘಟನೆಯ ಅಧ್ಯಕ್ಷ ಎಚ್.ಬಿ. ವೀರಾಪೂರ, ಪ್ರಧಾನ ಕಾರ್ಯದರ್ಶಿ ಪರಶುರಾಮ ಎಫ್. ಕಟ್ಟಿಮನಿ, ಸಂಘಟನಾ ಕಾರ್ಯದರ್ಶಿ ಮೋಹನ ಎಚ್. ಕಟ್ಟಿಮನಿ, ಕೊರಮ ಸಮಾಜ ಹವ್ಯಾಸಿ ಸಂಘದ ಅಧ್ಯಕ್ಷ ಕೃಷ್ಣಪ್ಪ ಬಾಗಲಕೋಟಿ, ಸೆಟ್ಲಮೆಂಟ್ ಮಾರುತಿ ದೇವಸ್ಥಾನ ಕಮಿಟಿಯ ಅಧ್ಯಕ್ಷ ವೈ.ಜಿ. ಗಡಾದ, ಹಿರಿಯರಾದ ಸಿದ್ದಪ್ಪ ಗೋಕಾವಿ, ವೈ.ಬಿ. ಕೊರವರ, ಅಶೋಕ ಎಫ್. ಕಟ್ಟಿಮನಿ, ಮಾರುತಿ ಎಂ. ಕಟ್ಟಿಮನಿ ಹಾಗೂ ನಗರಸಭೆ ಸದಸ್ಯ ಸುರೇಶ ಸಿ. ಕಟ್ಟಿಮನಿ ಸೇರಿದಂತೆ ಉಭಯ ಸಂಘಟನೆಗಳ ಪದಾಧಿಕಾರಿಗಳು, ಸಮಾಜದ ಯುವಕರು, ಪುರುಷರು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಪೂಜಾ ಕಾರ್ಯಕ್ರಮದ ಬಳಿಕ ನಗರದ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಿಂದ ಶರಣ ಶ್ರೀ ನುಲಿಯ ಚಂದಯ್ಯನವರ ಭಾವಚಿತ್ರವನ್ನು ಅಲಂಕರಿಸಿದ ರಥದಲ್ಲಿ ಪ್ರತಿಷ್ಠಾಪಿಸಿ, ಬಾಜಾ-ಭಜಂತ್ರಿ ವಾದ್ಯಮೇಳದೊಂದಿಗೆ ಮೆರವಣಿಗೆ ನಡೆಸಲಾಯಿತು.

ಕೊರಮ ಸಮಾಜದ ಸದಸ್ಯರು ಹಾಗೂ ವಿವಿಧ ಸಮುದಾಯಗಳ ಜನರು ಮೆರವಣಿಗೆಯಲ್ಲಿ ಪಾಲ್ಗೊಂಡು ಜಯಂತ್ಯೋತ್ಸವದ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿದರು.

> ಶರಣ ಶ್ರೀ ನುಲಿಯ ಚಂದಯ್ಯನವರ ಆದರ್ಶಗಳು ಸಮಾಜದ ಏಕತೆ, ಶ್ರಮದ ಗೌರವ ಮತ್ತು ಮಾನವೀಯ ಮೌಲ್ಯಗಳಿಗೆ ದಾರಿದೀಪವಾಗಿವೆ. ಅವರ ಸಂದೇಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ.
> - ಎಚ್.ಬಿ. ವೀರಾಪೂರ, ಅಧ್ಯಕ್ಷರು

ಮೆರವಣಿಗೆಯ ಬಳಿಕ ಸಮಾಜದ ಸದಸ್ಯರು ಗಾಂಧಿನಗರಕ್ಕೆ ಆಗಮಿಸಿ, ಪಾಲಾ-ಬದಾಮಿ ರಸ್ತೆಯ ಪಕ್ಕದ ಮೈದಾನದ ಸಮೀಪದಲ್ಲಿರುವ ಶ್ರೀ ನುಲಿಯ ಚಂದಯ್ಯ ಸರ್ಕಲ್‌ನಲ್ಲಿ ಶರಣರ ನಾಮಫಲಕಕ್ಕೆ ಪೂಜೆ ಸಲ್ಲಿಸಿದರು.

ಬಳಿಕ ಕೊರಮ ಭವನದಲ್ಲಿ 5ನೇ ನಂಬರ್ ಶಾಲೆಯ ವಿದ್ಯಾರ್ಥಿಗಳು, ಶಿಕ್ಷಕ ವೃಂದ, ಸಮಾಜದ ಸದಸ್ಯರು ಹಾಗೂ ಸಾರ್ವಜನಿಕರಿಗೆ ಅನ್ನದಾಸೋಹ ಏರ್ಪಡಿಸಲಾಗಿತ್ತು.

## ಮನದ ದಣಿವು ಮರೆಸಿದ ಸುಮಧುರ ಸಂಗೀತ | ಶ್ರೋತೃಗಳ ಹೃದಯದಲ್ಲಿ ಮೊಳಗಿದ ರಾಗ-ಭಾವ
# ರಾಗಗಳ ಅಲೆಯಲ್ಲಿ ಮಿಂದೆದ್ದ ಕೋಚಲಾಪೂರ




**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ದಿನವಿಡೀ ದುಡಿಮೆಯ ದಣಿವು, ಬದುಕಿನ ಜಂಜಾಟ ಹಾಗೂ ಒತ್ತಡದ ನಡುವೆ ಒಂದಿಷ್ಟು ಹೊತ್ತು ಮನಸ್ಸಿಗೆ ಮುದ ನೀಡಿದ ಸಂಗೀತದ ಲೋಕದಲ್ಲಿ ಕೋಚಲಾಪೂರ ಗ್ರಾಮ ಇತ್ತೀಚೆಗೆ ತೇಲಾಡಿತು. ಒಂದೆಡೆ ಸುಮಧುರ ಗಾಯನ, ಮತ್ತೊಂದೆಡೆ ಹಾರ್ಮೋನಿಯಂ-ತಬಲಾದ ನಾದ... ಇವೆಲ್ಲವೂ ಒಂದಾಗಿ ಬೆರೆತು ಗ್ರಾಮದ ವಾತಾವರಣವನ್ನೇ ಸಂಗೀತಮಯವಾಗಿಸಿತು.

ನರೇಗಲ್ಲದ ಭಾರತೀಯ ಸಂಗೀತ ಸೇವಾ ಸಂಸ್ಥೆ ವತಿಯಿಂದ ಸಮೀಪದ ಕೋಚಲಾಪೂರ ಗ್ರಾಮದಲ್ಲಿ ಆಯೋಜಿಸಿದ್ದ ಸಂಗೀತ ಕಾರ್ಯಕ್ರಮದಲ್ಲಿ ರಾಗಗಳ ಸವಿ, ಗಾಯನದ ಭಾವ ಹಾಗೂ ವಾದ್ಯಗಳ ನಾದಕ್ಕೆ ಶ್ರೋತೃಗಳು ಮಂತ್ರಮುಗ್ಧರಾದರು. ಕೆಲ ಹೊತ್ತು ಬದುಕಿನ ಚಿಂತೆಗಳನ್ನು ಮರೆತು ಸಂಗೀತದೊಂದಿಗೆ ಮನಸ್ಸುಗಳು ಸಂಭ್ರಮಿಸಿದವು.

ಕಾರ್ಯಕ್ರಮಕ್ಕೆ ಅಂದಾನಗೌಡ ಅಮಾತಿಗೌಡ್ರ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ಮಾತನಾಡಿ, ಸಂಗೀತಕ್ಕೆ ಯಾವುದೇ ಗಡಿ ಇಲ್ಲ. ಅದು ಭಾಷೆ, ಜಾತಿ, ಧರ್ಮಗಳನ್ನು ಮೀರಿ ಮನುಷ್ಯನ ಮನಸ್ಸನ್ನು ಮತ್ತೊಂದು ಮನಸ್ಸಿನೊಂದಿಗೆ ಬೆಸೆಯುವ ಶಕ್ತಿ ಹೊಂದಿದೆ ಎಂದರು. ಭಾರತೀಯ ಸಂಗೀತವು ನಮ್ಮ ಶ್ರೀಮಂತ ಸಂಸ್ಕೃತಿ ಹಾಗೂ ಪರಂಪರೆಯ ಪ್ರತಿಬಿಂಬವಾಗಿದೆ. ಇಂದಿನ ವೇಗದ ಬದುಕಿನಲ್ಲಿ ಮನುಷ್ಯ ಹಲವು ರೀತಿಯ ಒತ್ತಡಗಳನ್ನು ಎದುರಿಸುತ್ತಿದ್ದಾನೆ. ಅಂತಹ ಸಂದರ್ಭದಲ್ಲಿ ಸಂಗೀತವು ಮನಸ್ಸಿಗೆ ನೆಮ್ಮದಿ ನೀಡುವ ಮಧುರ ಸಾಧನವಾಗಿದೆ. ಸಂಗೀತ ಕೇಳಿದಾಗ ಮನಸ್ಸಿನ ಭಾರ ಹಗುರವಾಗಿ, ಉತ್ತಮ ಚಿಂತನೆಗೆ ದಾರಿ ತೆರೆದುಕೊಳ್ಳುತ್ತದೆ. ಗ್ರಾಮೀಣ ಭಾಗದಲ್ಲಿಯೂ ಸಂಗೀತದ ಸೊಗಡನ್ನು ಪಸರಿಸುತ್ತಿರುವ ಭಾರತೀಯ ಸಂಗೀತ ಸೇವಾ ಸಂಸ್ಥೆಯ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಿವನಗೌಡ ಅಯ್ಯನಗೌಡ್ರ ಮಾತನಾಡಿ, ಸಂಗೀತ ಕೇವಲ ಮನರಂಜನೆಯಲ್ಲ, ಅದು ಮನಸ್ಸನ್ನು ಅರಳಿಸುವ ಕಲೆ. ಸಂತೋಷದಲ್ಲಿದ್ದಾಗಲೂ, ನೋವಿನಲ್ಲಿದ್ದಾಗಲೂ ಮನುಷ್ಯನ ಭಾವನೆಗಳಿಗೆ ಸಂಗೀತ ಧ್ವನಿಯಾಗುತ್ತದೆ ಎಂದರು.

ಗ್ರಾಮೀಣ ಪ್ರದೇಶಗಳಲ್ಲಿ ಇಂತಹ ಸಂಗೀತ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು. ಯುವಜನರು ಸಂಗೀತ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ ಅವರಲ್ಲಿ ಉತ್ತಮ ಅಭಿರುಚಿ ಮತ್ತು ಸಂಸ್ಕಾರ ಬೆಳೆಯುತ್ತದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿದ್ದ ಶಿಕ್ಷಕ ವಿ.ವಿ. ಅಣ್ಣಿಗೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಂಗೀತದ ಮಹತ್ವ ಹಾಗೂ ಭಾರತೀಯ ಸಂಗೀತ ಪರಂಪರೆಯ ವೈಶಿಷ್ಟ್ಯವನ್ನು ವಿವರಿಸಿದರು. ಬಾಪುಸಾಬ ಮಾಕಿ, ವಿರೂಪಾಕ್ಷಪ್ಪ ಮೇಟಿಮಠ, ಅಂದಾನಯ್ಯ ಮಾಲಗಿತ್ತಿಮಠ, ರಾಜೇಸಾಬ ನದಾಫ್, ಶರಣಪ್ಪಗೌಡ್ರ ಅಯ್ಯನಗೌಡ್ರ ಹಾಗೂ ಎ.ಎಚ್. ರೌಡೂರ ಉಪಸ್ಥಿತರಿದ್ದರು.

ಬಳಿಕ ಡಾ. ವೆಂಕಟೇಶ ಕುಲಕರ್ಣಿ ನಡೆಸಿಕೊಟ್ಟ ಸಂಗೀತ ಕಾರ್ಯಕ್ರಮವೇ ಇಡೀ ಸಂಜೆಯ ಪ್ರಮುಖ ಆಕರ್ಷಣೆಯಾಗಿತ್ತು. ಅವರ ಕಂಠದಿಂದ ಹೊರಹೊಮ್ಮಿದ ಸುಮಧುರ ರಾಗಗಳು ಗ್ರಾಮದ ವಾತಾವರಣದಲ್ಲಿ ಮಧುರ ಅಲೆಗಳನ್ನು ಎಬ್ಬಿಸಿದವು.

> ಸಂಗೀತವು ಕೇವಲ ಕಿವಿಗೆ ಕೇಳಿಸುವ ಸ್ವರವಲ್ಲ; ಅದು ದಣಿದ ಮನಸ್ಸಿಗೆ ನೆಮ್ಮದಿ ನೀಡುವ ಔಷಧಿ. ಗ್ರಾಮೀಣ ಭಾಗದಲ್ಲೂ ಇಂತಹ ಸಂಗೀತ ಕಾರ್ಯಕ್ರಮಗಳು ಹೆಚ್ಚಾಗಿ ನಡೆಯುವುದರಿಂದ ನಮ್ಮ ಸಂಸ್ಕೃತಿ, ಕಲೆ ಮತ್ತು ಉತ್ತಮ ಮೌಲ್ಯಗಳು ಮುಂದಿನ ಪೀಳಿಗೆಗೂ ತಲುಪುತ್ತವೆ.
> - ಡಾ. ವೆಂಕಟೇಶ ಕುಲಕರ್ಣಿ

ಗಾಯನಕ್ಕೆ ಶಿಕ್ಷಕ ಡಿ.ಎಚ್. ಅಣ್ಣಿಗೇರಿ ಹಾರ್ಮೋನಿಯಂ ಹಾಗೂ ಶುಕ್ರಸಾಬ ಮುಲ್ಲಾ ತಬಲಾ ಸಾಥ್ ನೀಡಿದರು. ಗಾಯನ, ಹಾರ್ಮೋನಿಯಂ ಮತ್ತು ತಬಲಾದ ನಾದಗಳು ಒಂದಕ್ಕೊಂದು ಬೆರೆತು ಸಂಗೀತದ ಸುಂದರ ಲೋಕವನ್ನೇ ಸೃಷ್ಟಿಸಿದವು.

ರಾಗಗಳು ಮೊಳಗುತ್ತಿದ್ದಂತೆ ಶ್ರೋತೃಗಳ ಕಣ್ಣುಗಳು ವೇದಿಕೆಯತ್ತ ನೆಟ್ಟಿದ್ದವು. ಕೆಲವರು ತಲೆದೂಗಿದರೆ, ಮತ್ತೆ ಕೆಲವರು ಚಪ್ಪಾಳೆ ತಟ್ಟುತ್ತಾ ಕಲಾವಿದರನ್ನು ಪ್ರೋತ್ಸಾಹಿಸಿದರು. ಕ್ಷಣಕಾಲ ಇಡೀ ಗ್ರಾಮವೇ ಸಂಗೀತದ ತಾಳಕ್ಕೆ ಹೆಜ್ಜೆ ಹಾಕಿದಂತೆ ಭಾಸವಾಯಿತು.

ಸಂಗೀತ ಕಾರ್ಯಕ್ರಮ ಮುಗಿದರೂ ಅದರ ನಾದ ಮಾತ್ರ ಶ್ರೋತೃಗಳ ಮನಸ್ಸಿನಲ್ಲಿ ಬಹುಕಾಲ ಮೊಳಗುತ್ತಲೇ ಇತ್ತು.

ಕಾರ್ಯಕ್ರಮದಲ್ಲಿ ಗಣ್ಯರು, ಸಂಗೀತಾಸಕ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು. ನಂದಕುಮಾರ ಸ್ವಾಗತಿಸಿ ನಿರೂಪಿಸಿದರು. ಅಂದಾನಯ್ಯ ಮಾಲಗಿತ್ತಿಮಠ ವಂದಿಸಿದರು.

## ಸಂಕ್ಷಿಪ್ತ ಸುದ್ದಿಗಳು

### ಜಯಂತಿ ಸಂಭ್ರಮ; ನೂಲಿ ಚಂದಯ್ಯ ಕೊರವರ ಸಮಾಜ ಸಂಘಕ್ಕೆ ಚಾಲನೆ

# ನೂಲಿ ಚಂದಯ್ಯರ ಕಾಯಕ–ದಾಸೋಹ ತತ್ವ ಸಮಾಜಕ್ಕೆ ದಾರಿದೀಪ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕಾಯಕನಿಷ್ಠ ಯೋಗಿ ಹಾಗೂ ಶ್ರೇಷ್ಠ ವಚನಕಾರ ಶಿವಶರಣ ನುಲಿ ಚಂದಯ್ಯ ಅವರು ಕಾಯಕ ಮತ್ತು ದಾಸೋಹದ ಮೂಲಕ ಸಮಾಜಕ್ಕೆ ಬೆಳಕು ನೀಡಿದ ಮಹಾನ್ ಶರಣರು ಎಂದು ಕರೇವಾಡಿಮಠದ ಶ್ರೀ ಮಳೆಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ಪಟ್ಟಣದ ಹಿರೇಬಣ ಭಜಂತ್ರಿ ಓಣಿಯಲ್ಲಿ ಶುಕ್ರವಾರ ಆಯೋಜಿಸಿದ್ದ ಶ್ರೀ ನುಲಿ ಚಂದಯ್ಯ ಜಯಂತಿ, ನೂಲಿ ಚಂದಯ್ಯ ಕೊರವರ ಸಮಾಜ ಸಂಘದ ಉದ್ಘಾಟನೆ ಹಾಗೂ ಸಮಾಜದ ಪ್ರತಿಭಾವಂತರಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ನುಲಿ ಚಂದಯ್ಯ ಅವರು ತಮ್ಮ ವಚನಗಳ ಮೂಲಕ ಕಾಯಕದ ಮಹತ್ವವನ್ನು ಜಗತ್ತಿಗೆ ಸಾರಿದ್ದಾರೆ. ಕಾಯಕ ಹಾಗೂ ದಾಸೋಹಕ್ಕೆ ತಮ್ಮ ಬದುಕನ್ನೇ ಸಮರ್ಪಿಸಿಕೊಂಡ ಅವರು ಸಮಾಜಕ್ಕೆ ಆದರ್ಶವಾಗಿದ್ದು, ಕನ್ನಡ ಸಾಹಿತ್ಯ ಕ್ಷೇತ್ರಕ್ಕೂ ಸುಮಾರು 48 ವಚನಗಳ ಕೊಡುಗೆ ನೀಡಿದ್ದಾರೆ. ಅವರ ತತ್ವ–ಆದರ್ಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಕಾರ್ಯಕ್ರಮ ಹಾಗೂ ನೂಲಿ ಚಂದಯ್ಯ ಕೊರವರ ಸಮಾಜ ಸಂಘವನ್ನು ಉದ್ಘಾಟಿಸಿ ಮಾತನಾಡಿ, ಸಮಾಜದ ಸಂಘಟನೆ ಮತ್ತು ಅಭಿವೃದ್ಧಿಗೆ ಸಂಘಟಿತ ಪ್ರಯತ್ನ ಅಗತ್ಯವಾಗಿದೆ. ಸಮುದಾಯದ ಪ್ರತಿಭಾವಂತ ಮಕ್ಕಳನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯ ಶ್ಲಾಘನೀಯವಾಗಿದ್ದು, ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ವೀರಶೈವ ಪಂಚಮಸಾಲಿ ಸಮಾಜದ ತಾಲೂಕು ಅಧ್ಯಕ್ಷ ಮಂಜುನಾಥ ಮಾಗಡಿ ಮಾತನಾಡಿ, ನುಲಿ ಚಂದಯ್ಯ ಅವರು ಕಾಯಕ ಮತ್ತು ದಾಸೋಹದ ತತ್ವದಲ್ಲಿ ಬದುಕಿದ ಶ್ರೇಷ್ಠ ಶರಣರು. ಸಂಖ್ಯೆಯಲ್ಲಿ ಸಣ್ಣದಾಗಿದ್ದರೂ ನೂಲಿ ಸಮಾಜ ಕಾಯಕನಿಷ್ಠೆ ಹೊಂದಿದ್ದು, ಸಮುದಾಯದ ಅಭಿವೃದ್ಧಿಗೆ ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದು ಹೇಳಿದರು.

ಸಮಾಜದ ಕುಂದುಕೊರತೆಗಳ ಕುರಿತು ಸರ್ಕಾರ ಗಮನಹರಿಸಿ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು ಎಂದು ಅವರು ಒತ್ತಾಯಿಸಿದರು. ಬಿಜೆಪಿ ಯುವ ಮುಖಂಡರಾದ ಐ.ಎಸ್. ಪೂಜಾರ, ಹೊನಪ್ಪ ವಡ್ಡರ ಹಾಗೂ ಬಸವರಾಜ ಜಾಲಗಾರ ಮಾತನಾಡಿದರು. ಶಿವಪ್ಪ ಇಟಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ನೂಲಿ ಚಂದಯ್ಯ ಕೊರವರ ಸಮಾಜದ ಅಧ್ಯಕ್ಷ ನಾಗರಾಜ ಭಜಂತ್ರಿ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಜಯಕ್ಕ ಕಳ್ಳಿ, ಮಹಾದೇವಪ್ಪ ಅಂದಲಗಿ, ನವೀನ ಬೆಳ್ಳಟ್ಟಿ, ಹೇಮಣ್ಣ ಬುರಡಿ, ನಾಗಪ್ಪ ಓಂಕಾರಿ, ಸಂಘದ ಉಪಾಧ್ಯಕ್ಷ ಪ್ರಕಾಶ ಭಜಂತ್ರಿ, ಕಾರ್ಯದರ್ಶಿ ಆನಂದ ಭಜಂತ್ರಿ ಸೇರಿದಂತೆ ಸಂಘದ ಪದಾಧಿಕಾರಿಗಳು, ಸಮಾಜದ ಮುಖಂಡರು, ಹಿರಿಯರು, ಯುವಕರು ಹಾಗೂ ಮಹಿಳೆಯರು ಪಾಲ್ಗೊಂಡಿದ್ದರು.

ಕಾರ್ಯಕ್ರಮಕ್ಕೂ ಮುನ್ನ ಶಾಸಕ ಡಾ. ಚಂದ್ರು ಲಮಾಣಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ, ನೂತನ ಸಂಘಕ್ಕೆ ಶುಭ ಹಾರೈಸಿದರು.

> ಕಾಯಕ ಮತ್ತು ದಾಸೋಹದ ಮೂಲಕ ನುಲಿ ಚಂದಯ್ಯರು ಸಮಾಜಕ್ಕೆ ನೀಡಿದ ಸಂದೇಶ ಸಾರ್ವಕಾಲಿಕವಾಗಿದೆ. ಅವರ ಜೀವನಾದರ್ಶಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಂಡಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯ.
> - ಶ್ರೀ ಮಳೆಮಲ್ಲಿಕಾರ್ಜುನ ಶಿವಾಚಾರ್ಯರು

# ಕಾಯಕವೇ ಕೈಲಾಸ; ನೂಲಿ ಚಂದಯ್ಯರ ಆದರ್ಶ ಸ್ಮರಣೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಶುಕ್ರವಾರ ಶಿವಶರಣ ನೂಲಿ ಚಂದಯ್ಯನವರ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಾಲೆಯ ಮುಖ್ಯ ಶಿಕ್ಷಕ ಬಿ.ಎಂ. ಕುಂಬಾರ, 12ನೇ ಶತಮಾನದ ಸಮಕಾಲೀನ ಶರಣರಲ್ಲಿ ಒಬ್ಬರಾದ ನೂಲಿ ಚಂದಯ್ಯನವರು ಕಾಯಕವೇ ಕೈಲಾಸ ಎಂಬ ತತ್ವಕ್ಕೆ ತಮ್ಮ ಬದುಕಿನ ಮೂಲಕ ಜೀವ ತುಂಬಿದ ಮಹಾನ್ ವಚನಕಾರರಾಗಿದ್ದರು ಎಂದು ಹೇಳಿದರು.

ಮೇದೆ ಹುಲ್ಲಿನಿಂದ ಹಗ್ಗ ಹೊಸೆದು ಅದನ್ನು ಜಂಗಮ ದಾಸೋಹಕ್ಕೆ ಅರ್ಪಿಸುವ ಮೂಲಕ ಕಾಯಕದ ಮಹತ್ವವನ್ನು ಸಾರಿದ ನೂಲಿ ಚಂದಯ್ಯನವರು ಸಮಾಜಕ್ಕೆ ಆದರ್ಶಪ್ರಾಯರಾಗಿದ್ದಾರೆ. ಕನ್ನಡ ಸಾಹಿತ್ಯದ ಅತ್ಯಂತ ಮಹತ್ವದ ಹಾಗೂ ಅಪರೂಪದ ಅಭಿವ್ಯಕ್ತಿಯಾದ ವಚನ ಸಾಹಿತ್ಯದ ಬೆಳವಣಿಗೆಯಲ್ಲಿಯೂ ಅವರ ಕೊಡುಗೆ ಗಮನಾರ್ಹವಾಗಿದೆ ಎಂದರು.

ಸಿಆರ್‌ಪಿಗಳಾದ ಉಮೇಶ ನೇಕಾರ ಹಾಗೂ ಶ್ರೀನಿವಾಸ ಮತ್ತೂರ ಮಾತನಾಡಿ, ನೂಲಿ ಚಂದಯ್ಯನವರು ತಮ್ಮ ವಚನಗಳ ಮೂಲಕ ಕಾಯಕದ ಮಹತ್ವವನ್ನು ಸಮಾಜಕ್ಕೆ ಸಾರಿದ್ದಾರೆ. ಅವರ ಆದರ್ಶಗಳು ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಎಚ್.ಡಿ. ನಿಂಗರೆಡ್ಡಿ, ಆರ್.ಕೆ. ಉಪನಾಳ, ಆರ್.ಎಂ. ಶಿರಹಟ್ಟಿ, ಎಲ್.ಎ. ಬಣಕಾರ, ಪ್ರಶಿಕ್ಷಣಾರ್ಥಿಗಳಾದ ಗೌರಮ್ಮ ಮಜ್ಜಿಗುಡ್ಡ, ಶಿವರಾಜ ಸಜ್ಜನರ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



### ಒಂಬತ್ತು ದಿನ ಹಗಲು-ರಾತ್ರಿ ಶ್ರಮಿಸಿದ ಸೇವಕರು, ಶ್ರಮಿಕರು, ಸಿಬ್ಬಂದಿಗೆ ಜಾತ್ರಾ ಕಮಿಟಿಯಿಂದ ಸನ್ಮಾನ

# ಹರಿಜಾತ್ರೋತ್ಸವ ಯಶಸ್ಸಿನ ಹಿಂದಿನ ಕೈಗಳಿಗೆ ಅದ್ದೂರಿ ಗೌರವ

**ವಿಜಯಸಾಕ್ಷಿ ಸುದ್ದಿ, ಗದಗ**

ಅವಳಿ ನಗರದ ಗ್ರಾಮ ದೇವತೆಯರಾದ ಶ್ರೀ ದ್ಯಾಮವ್ವ ಹಾಗೂ ಶ್ರೀ ದುರ್ಗಮ್ಮ ದೇವಿಯರ ಹರಿಜಾತ್ರೋತ್ಸವವನ್ನು ಯಶಸ್ವಿಗೊಳಿಸಲು ಒಂಬತ್ತು ದಿನಗಳ ಕಾಲ ಹಗಲು–ರಾತ್ರಿ ಶ್ರಮಿಸಿದ ಸೇವಕರು, ಶ್ರಮಿಕರು, ದಾನಿಗಳು ಹಾಗೂ ವಿವಿಧ ಕ್ಷೇತ್ರಗಳ ಸಿಬ್ಬಂದಿಯನ್ನು ಜಾತ್ರಾ ಕಮಿಟಿಯು ಅದ್ದೂರಿಯಾಗಿ ಸನ್ಮಾನಿಸಿ ಗೌರವಿಸಿತು.

ಒಕ್ಕಲಗೇರಿ ಓಣಿಯಲ್ಲಿರುವ ಶ್ರೀ ದ್ಯಾಮವ್ವನ ಕಟ್ಟಿಯ ಆವರಣದಲ್ಲಿ ಜಾತ್ರಾ ಕಮಿಟಿಯಿಂದ ವಿಶೇಷ ಗೌರವ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗಿತ್ತು. ಜಾತ್ರಾ ಮಹೋತ್ಸವದುದ್ದಕ್ಕೂ ತೆರೆಮರೆಯಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿದ ಪ್ರತಿಯೊಬ್ಬರ ಕೊಡುಗೆಯನ್ನು ಸ್ಮರಿಸಿ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಒಂಬತ್ತು ದಿನಗಳ ಕಾಲ ಸ್ವಚ್ಛತಾ ಕಾರ್ಯದ ಮೂಲಕ ಗ್ರಾಮ ದೇವತೆಯರ ಸೇವೆಯಲ್ಲಿ ತೊಡಗಿದ್ದ ಪೌರಕಾರ್ಮಿಕರು, ಛಾಯಾಗ್ರಾಹಕರು, ಕೆ.ಇ.ಬಿ. ಸಿಬ್ಬಂದಿ, ಅಡುಗೆ ಭಟ್ಟರು ಹಾಗೂ ಅವರ ಸಹಾಯಕರು, ಪಾತ್ರೆ ಸ್ವಚ್ಛಗೊಳಿಸಿದವರು, ಪ್ರಸಾದ ಉಣಬಡಿಸಿದವರು ಹಾಗೂ ತೆಂಗಿನಕಾಯಿ ಒಡೆಯುವ ಸೇವಕರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ಜಾತ್ರೆಯ ವಿವಿಧ ಕಾರ್ಯಕ್ರಮಗಳಲ್ಲಿ ಅವಿರತವಾಗಿ ದುಡಿದ ಗಂಜೀ ಬಸವೇಶ್ವರ ಮಿತ್ರ ಮಂಡಳಿಯ ಸದಸ್ಯರು, ದೇವಸ್ಥಾನದ ಅರ್ಚಕರು ಹಾಗೂ ಕಾರ್ಯಕರ್ತರಿಗೂ ಗೌರವ ಸಮರ್ಪಿಸಲಾಯಿತು.

ಜಾತ್ರೆಯ ಯಶಸ್ಸಿನ ಹಿಂದೆ ತೆರೆಮರೆಯಲ್ಲಿ ಶ್ರಮಿಸಿದ ಪ್ರತಿಯೊಬ್ಬರ ಸೇವೆಯನ್ನು ಗುರುತಿಸಿ ಗೌರವಿಸಿರುವುದು ವಿಶೇಷವಾಗಿತ್ತು.

ಧನ ಸಹಾಯ ಮಾಡಿದವರಷ್ಟೇ ಅಲ್ಲದೆ, ತನು–ಮನದಿಂದ ಜಾತ್ರೆಯಲ್ಲಿ ಪಾಲ್ಗೊಂಡು ಸೇವೆ ಸಲ್ಲಿಸಿದವರನ್ನೂ ಗುರುತಿಸಿ ಗೌರವಿಸಿರುವುದು ಜಾತ್ರಾ ಕಮಿಟಿಯ ವಿಶೇಷ ಕಾರ್ಯವಾಗಿದೆ. ಭಕ್ತಿ ಮತ್ತು ಸೇವಾ ಮನೋಭಾವದಿಂದ ಕೆಲಸ ಮಾಡಿದ ನೂರಾರು ಜನರಿಗೆ ಈ ಸನ್ಮಾನ ಕಾರ್ಯಕ್ರಮ ಸಂತಸ ತಂದಿತು.




> ಹರಿಜಾತ್ರೋತ್ಸವದಲ್ಲಿ ಭಾಗವಹಿಸಿ ಗ್ರಾಮ ದೇವತೆಯರ ಸೇವೆ ಸಲ್ಲಿಸುವ ಅವಕಾಶ ದೊರಕಿದ್ದು ನನ್ನ ಪೂರ್ವಜನ್ಮದ ಪುಣ್ಯ ಎಂದು ಭಾವಿಸುತ್ತೇನೆ. ನಾಡಿನಾದ್ಯಂತ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ ಜಾತ್ರೆಯನ್ನು ಯಶಸ್ವಿಗೊಳಿಸಿದ್ದಾರೆ.
> - ನವೀನ ನಾಲ್ವಾಡ, ಜಾತ್ರಾ ಕಮಿಟಿ ಸಹ ಕಾರ್ಯದರ್ಶಿ

**18 ವರ್ಷಗಳ ಬಳಿಕ ಅದ್ದೂರಿ ಹರಿಜಾತ್ರೋತ್ಸವ**

ಪ್ರತಿ 12 ವರ್ಷಕ್ಕೊಮ್ಮೆ ನಡೆಯಬೇಕಿದ್ದ ಹರಿಜಾತ್ರೋತ್ಸವವು ಈ ಬಾರಿ 18 ವರ್ಷಗಳ ಬಳಿಕ ಅದ್ದೂರಿಯಾಗಿ ಜರುಗಿತು. ನಾಡಿನ ವಿವಿಧೆಡೆಯಿಂದ ಆಗಮಿಸಿದ್ದ ಭಕ್ತರು ನಿರೀಕ್ಷೆಗೂ ಮೀರಿ ತನು–ಮನ–ಧನದಿಂದ ಪಾಲ್ಗೊಂಡು ಗದಗ–ಬೆಟಗೇರಿಯ ಗ್ರಾಮ ದೇವತೆಯರ ಜಾತ್ರೆಯ ಯಶಸ್ಸಿಗೆ ಕಾರಣರಾದರು.

ಉಡಿ ತುಂಬುವ ಕಾರ್ಯಕ್ರಮದಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ಮುತ್ತೈದೆಯರು ಪಾಲ್ಗೊಂಡಿದ್ದು ಜಾತ್ರೆಯ ಪ್ರಮುಖ ಆಕರ್ಷಣೆಯಾಗಿತ್ತು. ಭಕ್ತಿ, ಸಂಭ್ರಮ ಹಾಗೂ ಸಾಂಪ್ರದಾಯಿಕ ವೈಭವದೊಂದಿಗೆ ನಡೆದ ಒಂಬತ್ತು ದಿನಗಳ ಹರಿಜಾತ್ರೋತ್ಸವ ಜನಮನ ಸೆಳೆಯುವಲ್ಲಿ ಯಶಸ್ವಿಯಾಯಿತು.

**ನಾಡಿನ ಗಮನ ಸೆಳೆದ ಭಂಡಾರ ಜಾತ್ರೆ**

2026ರ ಹರಿಜಾತ್ರೋತ್ಸವದಲ್ಲಿ ಈ ಬಾರಿ ನಡೆದ ಭಂಡಾರ ಜಾತ್ರೆ ನಾಡಿನ ಗಮನ ಸೆಳೆಯಿತು. ಭಕ್ತರು ನೀಡಿದ ಸುಮಾರು 17 ಟನ್‌ಗೂ ಅಧಿಕ ಭಂಡಾರದಲ್ಲಿ ಭಕ್ತರು ಮಿಂದೆದ್ದರು. ನಗರದ ಗಲ್ಲಿ–ಗಲ್ಲಿಗಳೂ ಹಳದಿ ಭಂಡಾರದಿಂದ ಕಂಗೊಳಿಸಿದ್ದು, ಜಾತ್ರೆಯ ವೈಭವಕ್ಕೆ ಮತ್ತಷ್ಟು ಮೆರುಗು ನೀಡಿತು.

ಹೀಗೆ ಹತ್ತು–ಹಲವಾರು ಧಾರ್ಮಿಕ, ಸಾಂಸ್ಕೃತಿಕ ಹಾಗೂ ಸಾಂಪ್ರದಾಯಿಕ ಕಾರ್ಯಕ್ರಮಗಳ ಯಶಸ್ಸಿಗೆ ಶ್ರಮಿಸಿದವರನ್ನು ಗುರುತಿಸಿ ಗೌರವಿಸಿರುವುದು ಹರಿಜಾತ್ರೋತ್ಸವದ ಅವಿಸ್ಮರಣೀಯ ಕ್ಷಣವಾಗಿತ್ತು.

ಶ್ರೀಧರ ವಜ್ರಬಂಡಿ, ರಾಜು ಖಾನಪ್ಪನವರ, ವೀರಣ್ಣ ಮೇಟಿ, ಮಂಜು ಅಂತರಗೊಂಡ, ಚೇತನ್ ಅಬ್ಬಿಗೇರಿ, ಮಲ್ಲು ಮಹಾಂತಶೆಟ್ಟರ, ಮಂಜುನಾಥ ಕುರ್ತಕೋಟಿ, ಈಶ್ವರ ಹಳ್ಳಿ, ಕಿರಣ ಕಮತರ, ಪರಶುರಾಮ ಹಳ್ಳದ, ನರಸಪ್ಪ ತುಕ್ಕಪ್ಪನವರ, ಬಸವರಾಜ ಹುಬ್ಬಳ್ಳಿ, ನಾಗರಾಜ ಮೆಣಸಗಿ, ವೀರೂಪಾಕ್ಷಪ್ಪ ಹೆಬ್ಬಳ್ಳಿ, ಮಹೇಶ ರೋಖಡೆ, ಸುರೇಶ ಹೆಬಸೂರ, ಪಂಚಾಕ್ಷರಿ ಅಂಗಡಿ ಸೇರಿದಂತೆ ನೂರಾರು ಕಾರ್ಯಕರ್ತರು ತಮ್ಮ ಅಮೂಲ್ಯ ಸೇವೆ ಸಲ್ಲಿಸುವ ಮೂಲಕ ಜಾತ್ರೆಯ ಯಶಸ್ಸಿನಲ್ಲಿ ಪ್ರಮುಖ ಪಾತ್ರ ವಹಿಸಿದರು

> 12 ವರ್ಷಕ್ಕೊಮ್ಮೆ ನಡೆಯಬೇಕಿದ್ದ ಜಾತ್ರೆ ಈ ವರ್ಷ 18 ವರ್ಷಗಳ ಬಳಿಕ ಸಂಪನ್ನವಾಗಿದೆ. ಹಿರಿಯರ ಮಾರ್ಗದರ್ಶನ ಹಾಗೂ ಭಕ್ತರ ಸಹಕಾರದೊಂದಿಗೆ ಜಾತ್ರೆ ಯಶಸ್ವಿಯಾಗಿದೆ. ಯಾವುದೇ ಜಾತಿ–ಧರ್ಮದ ಭೇದವಿಲ್ಲದೆ ಜಾತ್ರೆ ಅದ್ದೂರಿಯಾಗಿ ನಡೆದಿರುವುದು ವಿಶೇಷ. ಮುಂಬರುವ ಜಾತ್ರೆ ಇನ್ನಷ್ಟು ಅದ್ದೂರಿಯಾಗಿ ನಡೆಯಲಿ.
> -ಹೇಮಂತ ಗಿಡ್ಡಹನುಮಣ್ಣನವರ, ಜಾತ್ರಾ ಕಮಿಟಿಯ ಸಹ ಸಂಘಟನಾ ಕಾರ್ಯದರ್ಶಿ

> ಅವಳಿ ನಗರದ ಗ್ರಾಮ ದೇವತೆಯರ ಜಾತ್ರೆ ನಾಡಿನ ಹೆಸರಾಂತ ಜಾತ್ರೆಗಳಲ್ಲಿ ಒಂದಾಗಿದೆ. ಹಿಂದಿನ ಎಲ್ಲ ಜಾತ್ರೆಗಳಿಗಿಂತ ಈ ಬಾರಿಯ ಜಾತ್ರೆ ವಿಶಿಷ್ಟವಾಗಿ ಪೂರ್ಣಗೊಂಡಿದೆ. ಜಾತ್ರೆಯ ಯಶಸ್ಸಿನ ಹಿಂದೆ ಮಹಿಳೆಯರ ಪಾತ್ರ ಬಹಳ ಪ್ರಮುಖವಾಗಿತ್ತು. ಪ್ರತಿದಿನ ಸಾಂಸ್ಕೃತಿಕ ಕಾರ್ಯಕ್ರಮಗಳು ಯಶಸ್ವಿಯಾಗಿ ಜರುಗಿದವು. ನಿರೀಕ್ಷೆಗೂ ಮೀರಿ ಜಾತ್ರೆ ಯಶಸ್ವಿಯಾಗಿದೆ.
> - ಬಸವರಾಜ ಮಡಿವಾಳರ, ಜಾತ್ರಾ ಕಮಿಟಿ ಸಹ ಕಾರ್ಯದರ್ಶಿ

# ಸಾಹಿತ್ಯ ಓದಿ; ದೂರದೃಷ್ಟಿ ಬೆಳೆಸಿಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಿದ್ಯಾರ್ಥಿ ಜೀವನದಲ್ಲಿ ಕಾದಂಬರಿ, ಕಾವ್ಯ, ಕಥೆ ಸೇರಿದಂತೆ ವಿವಿಧ ಸಾಹಿತ್ಯ ಕೃತಿಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಸಾಹಿತ್ಯದ ಓದು ಕೇವಲ ಜ್ಞಾನವನ್ನು ವಿಸ್ತರಿಸುವುದಲ್ಲದೆ, ಬದುಕನ್ನು ನೋಡುವ ವಿಶಾಲವಾದ ದೃಷ್ಟಿಕೋನವನ್ನು ರೂಪಿಸುತ್ತದೆ ಎಂದು ಅಧ್ಯಾಪಕ ಡಾ. ಅರವಿಂದ ಪೂಜಾರ ಹೇಳಿದರು.

ಸ್ಥಳೀಯ ಅನ್ನದಾನೇಶ್ವರ ಪದವಿ, ಬಿಸಿಎ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಕೇಂದ್ರದ ಐಕ್ಯೂಎಸಿ ಘಟಕ ಮತ್ತು ಕನ್ನಡ ವಿಭಾಗದ ವತಿಯಿಂದ ಆಯೋಜಿಸಿದ್ದ 'ಡಾ. ಸಂ. ಶಿ. ಭೂಸನೂರಮಠ ಅವರ ಸಾಹಿತ್ಯ, ಒಂದು ಅವಲೋಕನ' ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗದಗ ಜಿಲ್ಲೆಯ ಹಿಂದಿನ ರೋಣ ತಾಲೂಕಿನ ನಿಡಗುಂದಿಯಲ್ಲಿ ಜನಿಸಿದ ಡಾ. ಸಂ. ಶಿ. ಭೂಸನೂರಮಠರು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡಿದ ಪ್ರತಿಭಾವಂತ ಸಾಹಿತಿಯಾಗಿದ್ದಾರೆ. ಅವರ ಸಾಹಿತ್ಯ ಕೃತಿಗಳಲ್ಲಿ ಸಮಾಜದ ಬದುಕು, ಸಂಸ್ಕೃತಿ ಹಾಗೂ ಮಾನವೀಯ ಮೌಲ್ಯಗಳ ಚಿತ್ರಣ ಕಾಣಸಿಗುತ್ತದೆ ಎಂದು ಹೇಳಿದರು.

ಭೂಸನೂರಮಠರು ಒಟ್ಟು 13 ಕಾವ್ಯ ಕೃತಿಗಳನ್ನು ರಚಿಸಿದ್ದು, ಸಂಪಾದಿತ ಕೃತಿಗಳು ಹಾಗೂ ಸೃಜನಶೀಲ ಸಾಹಿತ್ಯ ಕ್ಷೇತ್ರದಲ್ಲಿಯೂ ಗಮನಾರ್ಹ ಸಾಧನೆ ಮಾಡಿದ್ದಾರೆ ಎಂದು ವಿವರಿಸಿದರು.

ಸಂಗೀತ, ನೃತ್ಯ, ಕಲೆ ಸೇರಿದಂತೆ ನಮ್ಮ ಪ್ರಾಚೀನ ಸಂಸ್ಕೃತಿಯ ವಿವಿಧ ಆಯಾಮಗಳನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು. ಸಾಹಿತ್ಯ ಮತ್ತು ಕಲೆಯ ಮೂಲಕ ಜ್ಞಾನದ ಹಸಿವನ್ನು ನೀಗಿಸಿಕೊಂಡು, ವಿಶಾಲವಾದ ಚಿಂತನಾ ಶಕ್ತಿಯನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಡಾ. ಕಲ್ಲಯ್ಯ ಹಿರೇಮಠ ವಹಿಸಿದ್ದರು. ಕನ್ನಡ ವಿಭಾಗದ ಮುಖ್ಯಸ್ಥ ಪುಂಡಲೀಕ ಮಾದರ ಪ್ರಾಸ್ತಾವಿಕವಾಗಿ ಮಾತನಾಡಿದರು.

ವೇದಿಕೆಯಲ್ಲಿ ಡಾ. ಡಿ.ಎಲ್. ಪವಾರ್, ಡಾ. ಸಂದೀಪಕುಮಾರ ಬಿ., ರಾಮಚಂದ್ರ ಜೆ., ಶರಣು ದೊಡ್ಡಮನಿ, ರವಿ ಬಡಿಗೇರ ಸೇರಿದಂತೆ ಕಾಲೇಜಿನ ಬೋಧಕ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ವಿದ್ಯಾರ್ಥಿ–ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

> ವಿದ್ಯಾರ್ಥಿಗಳು ಪಠ್ಯಪುಸ್ತಕಗಳಿಗೆ ಮಾತ್ರ ಸೀಮಿತವಾಗದೆ ಕಾದಂಬರಿ, ಕಾವ್ಯ ಹಾಗೂ ಕಥೆಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಸಾಹಿತ್ಯದ ಓದು ಜ್ಞಾನವನ್ನು ವಿಸ್ತರಿಸುವುದರ ಜತೆಗೆ ಬದುಕನ್ನು ಅರ್ಥೈಸಿಕೊಳ್ಳುವ ದೂರದೃಷ್ಟಿಯನ್ನೂ ನೀಡುತ್ತದೆ.
> - ಡಾ. ಅರವಿಂದ ಪೂಜಾರ

# ರೇನ್‌ಬೋ ಶಾಲೆಯಲ್ಲಿ ರಕ್ಷಾಬಂಧನ ಆಚರಣೆ




**ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ**

ಸ್ಥಳೀಯ ರೇನ್‌ಬೋ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ ರಕ್ಷಾಬಂಧನ ಹಬ್ಬವನ್ನು ಅತ್ಯಂತ ಸಡಗರ, ಸಂಭ್ರಮದ ವಾತಾವರಣದಲ್ಲಿ ಆಚರಿಸಲಾಯಿತು.

ಭಾರತೀಯ ಸಂಸ್ಕೃತಿ ಹಾಗೂ ಸೋದರತ್ವದ ಪ್ರತೀಕವಾದ ರಕ್ಷಾಬಂಧನ ಹಬ್ಬದ ಅಂಗವಾಗಿ ಶಾಲಾ ಆವರಣದಲ್ಲಿ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಸವಿತಾ ಕಮ್ಮಾರ ಮಾತನಾಡಿ, "ರಕ್ಷಾಬಂಧನ ಕೇವಲ ಒಂದು ಸಂಪ್ರದಾಯವಲ್ಲ. ಅದು ಪರಸ್ಪರ ಪ್ರೀತಿ, ವಿಶ್ವಾಸ, ರಕ್ಷಣೆ ಹಾಗೂ ಹೆಣ್ಣುಮಕ್ಕಳಿಗೆ ನೀಡಬೇಕಾದ ಗೌರವದ ಸಂಕೇತವಾಗಿದೆ. ಇಂತಹ ಹಬ್ಬಗಳು ವಿದ್ಯಾರ್ಥಿಗಳಲ್ಲಿ ಸೋದರಭಾವ ಮತ್ತು ಸಾಮಾಜಿಕ ಮೌಲ್ಯಗಳನ್ನು ಬೆಳೆಸುತ್ತವೆ," ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರು ತಮ್ಮ ಸಹಪಾಠಿ ವಿದ್ಯಾರ್ಥಿಗಳಿಗೆ ಆರತಿ ಬೆಳಗಿ, ತಿಲಕವಿಟ್ಟು, ರಾಖಿ ಕಟ್ಟಿ ಸಿಹಿ ಹಂಚುವ ಮೂಲಕ ಸಂಭ್ರಮಿಸಿದರು. ಈ ವೇಳೆ ಬಾಲಕರು ತಮ್ಮ ಸಹೋದರಿಯರಿಗೆ ರಕ್ಷಣೆ ಹಾಗೂ ಗೌರವ ನೀಡುವ ಭರವಸೆ ವ್ಯಕ್ತಪಡಿಸಿದರು. ಶಾಲಾ ಆಡಳಿತ ಮಂಡಳಿಯ ಪದಾಧಿಕಾರಿಗಳು, ಮುಖ್ಯೋಪಾಧ್ಯಾಯರು ಹಾಗೂ ಸಹಶಿಕ್ಷಕಿಯರಾದ ಫಾತಿಮಾ, ದೀಪಾ, ರೇಖಾ, ರೇಣುಕಾ, ಸೌಮ್ಯ ಮತ್ತು ಸೃಷ್ಟಿ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಕಾರ್ಯಕ್ರಮದ ಕೊನೆಯಲ್ಲಿ ಎಲ್ಲ ವಿದ್ಯಾರ್ಥಿಗಳಿಗೆ ಸಿಹಿ ವಿತರಿಸಿ, ರಕ್ಷಾಬಂಧನ ಹಬ್ಬದ ಶುಭಾಶಯ ಕೋರಲಾಯಿತು. ರಿಹಾನಾ ಮುಕಾಂದರ್ ಕಾರ್ಯಕ್ರಮ ನಿರೂಪಿಸಿದರು.

# ಗದಗ ಉತ್ಸವ ಸೇವೆಗೆ ವಿದ್ಯಾರ್ಥಿಗಳಿಗೆ ವಿಶೇಷ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ವತಿಯಿಂದ ಆಯೋಜಿಸಲಾಗಿದ್ದ ಗದಗ ಉತ್ಸವ–2026ರ ಯಶಸ್ಸಿಗೆ ವಾಲಂಟೀರ್‌ಗಳಾಗಿ ಸೇವೆ ಸಲ್ಲಿಸಿದ ಕಾಲೇಜು ವಿದ್ಯಾರ್ಥಿಗಳನ್ನು ಪ್ರಮಾಣಪತ್ರ ನೀಡಿ ವಿಶೇಷವಾಗಿ ಗೌರವಿಸಲಾಯಿತು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ, ಗದುಗಿನ ಕೆ.ಎಲ್.ಇ. ಜಿ.ಟಿ. ಮಹಾವಿದ್ಯಾಲಯದ ಪ್ರಾಚಾರ್ಯೆ ಚೈತ್ರಾ ದಲ್ಬಂಜನ್, ಕಾರ್ತಿಕ್ ಮುತ್ತಿನಪೆಂಡಿಮಠ ಹಾಗೂ ಬಸವರಾಜ ಎಣ್ಣೆ ಅವರನ್ನು ಸನ್ಮಾನಿಸಲಾಯಿತು.


ಆ. 17ರಂದು ನಡೆದ ಗದಗ ಉತ್ಸವದಲ್ಲಿ ವಿದ್ಯಾರ್ಥಿಗಳು ವಾಲಂಟೀರ್ ಗಳಾಗಿ ಉತ್ಸಾಹದಿಂದ ಸೇವೆ ಸಲ್ಲಿಸಿದ್ದು, ಉತ್ಸವದ ಯಶಸ್ಸಿಗೆ ಅವರ ಕೊಡುಗೆ ಮಹತ್ವದ್ದಾಗಿತ್ತು ಎಂದು ಸಂಸ್ಥೆಯ ಪದಾಧಿಕಾರಿಗಳು ಶ್ಲಾಘಿಸಿದರು. ಈ ಸಂದ ರ್ಭದಲ್ಲಿ ವಿದ್ಯಾರ್ಥಿಗಳು ತಮ್ಮ ಅನುಭವಗಳನ್ನು ಹಂಚಿಕೊಂಡು, ಗದಗ ಉತ್ಸವವು ಸಾರ್ವಜನಿಕರೊಂದಿಗೆ ಬೆರೆಯಲು ಹಾಗೂ ವಿವಿಧ ಚಟುವಟಿ ಕೆಗಳನ್ನು ಹತ್ತಿರದಿಂದ ಅರಿಯಲು ಉತ್ತಮ ವೇದಿಕೆಯಾಯಿತು ಎಂದು ಅಭಿಪ್ರಾಯಪಟ್ಟರು. ಯುವಜನರನ್ನು ಸಾಮಾಜಿಕ ಹಾಗೂ ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಲು ಇಂತಹ ಸನ್ಮಾನಗಳು ಪ್ರೇರಣೆಯಾಗಲಿವೆ ಎಂದು ಸಂಸ್ಥೆಯ ಪದಾಧಿಕಾರಿಗಳು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಚನ್ನವೀರಪ್ಪ ಹುಣಸಿಕಟ್ಟಿ, ಉಪಾಧ್ಯಕ್ಷ ಜಯದೇವ ಮೆಣಸಗಿ, ಪ್ರಕಾಶ ಉಗಲಾಟದ, ಶಿದ್ರಾಮಪ್ಪ ಉಮಚಗಿ, ಸಹ ಗೌರವ ಕಾರ್ಯದರ್ಶಿಗಳಾದ ರಾಘವೇಂದ್ರ ಕಾಳವಾಡ, ಅಶೋಕ್ ಸಂಕಣ್ಣವರ, ಕೋಶಾಧ್ಯಕ್ಷ ಅರವಿಂದ ಕಾಮತ ಹಾಗೂ ಗದಗ ಉತ್ಸವ–2026ರ ಕೋ–ಚೇರ್ಮನ್ ಮಂಜುನಾಥ ವೀರಲಿಂಗಯ್ಯನಮಠ ಉಪಸ್ಥಿತರಿದ್ದರು.

### ರಸ್ತೆಗಿಂತ ಗುಂಡಿಗಳೇ ಹೆಚ್ಚು; ನರೇಗಲ್ಲ-ತೊಂಡಿಹಾಳ ರಸ್ತೆ ನರಕಯಾತನೆ

# 6 ಕಿ.ಮೀ.ಗೆ ಮುಕ್ಕಾಲು ಗಂಟೆ..!?

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಕೇವಲ ಆರು ಕಿಲೋಮೀಟರ್ ರಸ್ತೆ ಕ್ರಮಿಸಲು ಮುಕ್ಕಾಲು ಗಂಟೆ ಬೇಕು ಎಂದರೆ ಆ ರಸ್ತೆಯ ದುಸ್ಥಿತಿ ಎಷ್ಟಿರಬಹುದು? ನರೇಗಲ್ಲ–ತೊಂಡಿಹಾಳ ನಡುವಿನ ಪ್ರಮುಖ ಸಂಪರ್ಕ ರಸ್ತೆ ಇದೀಗ ಇದೇ ದುಸ್ಥಿತಿಗೆ ಸಾಕ್ಷಿಯಾಗಿದೆ. ಸಂಪೂರ್ಣ ಹದಗೆಟ್ಟ ರಸ್ತೆಯಿಂದ ವಾಹನ ಸವಾರರು ಹಾಗೂ ಸಾರ್ವಜನಿಕರು ಪ್ರತಿದಿನ ನರಕಯಾತನೆ ಅನುಭವಿಸುವಂತಾಗಿದೆ.

ನರೇಗಲ್ಲ–ತೊಂಡಿಹಾಳ ನಡುವಿನ ಸುಮಾರು 6 ಕಿ.ಮೀ. ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ರಸ್ತೆ ತುಂಬೆಲ್ಲ ದೊಡ್ಡ ದೊಡ್ಡ ಗುಂಡಿಗಳು ನಿರ್ಮಾಣವಾಗಿವೆ. ಮಳೆ ಬಂದಾಗ ಈ ಗುಂಡಿಗಳಲ್ಲಿ ನೀರು ನಿಂತು ರಸ್ತೆ ಯಾವುದು, ಗುಂಡಿ ಯಾವುದು ಎಂಬುದೇ ತಿಳಿಯದ ಪರಿಸ್ಥಿತಿ ನಿರ್ಮಾಣವಾಗಿದೆ.

ಹೀಗಾಗಿ ವಾಹನ ಸವಾರರು ರಸ್ತೆಯಲ್ಲಿ ಸಂಚರಿಸುವ ಬದಲು ರಸ್ತೆಯನ್ನೇ ಹುಡುಕಿಕೊಂಡು ಸಾಗಬೇಕಾದ ಪರಿಸ್ಥಿತಿ ಎದುರಾಗಿದೆ.

ವಿಶೇಷವಾಗಿ ದ್ವಿಚಕ್ರ ವಾಹನ ಸವಾರರು ಅಪಘಾತದ ಭೀತಿಯಲ್ಲೇ ಈ ಮಾರ್ಗದಲ್ಲಿ ಸಂಚರಿಸುತ್ತಿದ್ದಾರೆ.

ಸಣ್ಣ ವಾಹನಗಳ ಚಾಲಕರಿಗೂ ರಸ್ತೆ ಸಂಚಾರ ದೊಡ್ಡ ಸವಾಲಾಗಿ ಪರಿಣಮಿಸಿದೆ.

ನರೇಗಲ್ಲ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ತೊಂಡಿಹಾಳ ಮಾರ್ಗವು ಅತ್ಯಂತ ಪ್ರಮುಖ ಸಂಪರ್ಕ ರಸ್ತೆಯಾಗಿದೆ. ಈ ರಸ್ತೆ ಮುಂದಿನ ಪ್ರದೇಶಗಳನ್ನು ಹೈದರಾಬಾದ್–ಕರ್ನಾಟಕ ಭಾಗ ದೊಂದಿಗೆ ಸಂಪರ್ಕಿಸುವ ಪ್ರಮುಖ ಮಾರ್ಗವಾಗಿದ್ದರೂ, ರಸ್ತೆ ಅಭಿವೃದ್ಧಿ ಹಾಗೂ ದುರಸ್ತಿ ವಿಚಾರದಲ್ಲಿ ಸಂಬಂಧಿಸಿದ ಇಲಾಖೆ ಸಂಪೂರ್ಣ ನಿರ್ಲಕ್ಷ್ಯ ವಹಿಸಿದೆ ಎಂಬ ಆರೋಪ ಸಾರ್ವಜನಿಕರಿಂದ ಕೇಳಿಬರುತ್ತಿದೆ.

**ಆಂಬ್ಯುಲೆನ್ಸ್‌ಗೂ ಸಂಕಷ್ಟ... ಶಾಲಾ ವಾಹನಗಳಿಗೂ ತೊಂದರೆ**

ರಸ್ತೆ ಹದಗೆಟ್ಟಿರುವ ಪರಿಣಾಮ ವಾಹನಗಳ ನಿರ್ವಹಣಾ ವೆಚ್ಚವೂ ಹೆಚ್ಚುತ್ತಿದೆ. ತುರ್ತು ಸಂದರ್ಭದಲ್ಲಿ ಆಂಬ್ಯುಲೆನ್ಸ್‌ಗಳು ವೇಗವಾಗಿ ಸಂಚರಿಸುವುದಕ್ಕೂ ಅಡ್ಡಿಯಾಗುತ್ತಿದೆ.

ಶಾಲಾ ವಾಹನಗಳು ಹಾಗೂ ಸಾರ್ವಜನಿಕ ಸಾರಿಗೆ ವ್ಯವಸ್ಥೆಗೂ ರಸ್ತೆ ದುಸ್ಥಿತಿ ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದೆ. ಪ್ರತಿದಿನ ಈ ರಸ್ತೆಯಲ್ಲಿ ಸಂಚರಿಸುವ ಸಾರ್ವಜನಿಕರು, ರೈತರು, ವಿದ್ಯಾರ್ಥಿಗಳು ಹಾಗೂ ವ್ಯಾಪಾರಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದು, ಹಲವು ವರ್ಷಗಳಿಂದ ರಸ್ತೆ ದುರಸ್ತಿಗೆ ಒತ್ತಾಯಿಸುತ್ತಿದ್ದರೂ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆತಿಲ್ಲ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹದಗೆಟ್ಟ ರಸ್ತೆಯಿಂದ ಕೆಲವೇ ಕಿಲೋಮೀಟರ್ ಪ್ರಯಾಣಕ್ಕೂ ಮುಕ್ಕಾಲು ಗಂಟೆ ಸಮಯ ವ್ಯಯವಾಗುತ್ತಿದೆ. ಅಭಿವೃದ್ಧಿಯ ಮಾತುಗಳು ಕೇಳಿಬರುತ್ತಿದ್ದರೂ, ಪ್ರಮುಖ ಸಂಪರ್ಕ ರಸ್ತೆಯ ಈ ದುಸ್ಥಿತಿ ಮಾತ್ರ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಹಿಡಿದ ಕನ್ನಡಿಯಾಗಿದೆ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕೂಡಲೇ ರಸ್ತೆ ದುರಸ್ತಿ ಕಾರ್ಯ ಕೈಗೊಂಡು ಅಗತ್ಯವಿದ್ದರೆ ಸಂಪೂರ್ಣವಾಗಿ ನವೀಕರಣ ಮಾಡಬೇಕು.

ಇಲ್ಲವಾದಲ್ಲಿ ಸಾರ್ವಜನಿಕರನ್ನು ಸಂಘಟಿಸಿ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಸ್ಥಳೀಯರು ಎಚ್ಚರಿಸಿದ್ದಾರೆ.

> ನರೇಗಲ್ಲ–ತೊಂಡಿಹಾಳ ರಸ್ತೆ ಈ ಭಾಗದ ಪ್ರಮುಖ ಸಂಪರ್ಕ ಮಾರ್ಗವಾಗಿದೆ. ಆದರೆ ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ಕೇವಲ 6 ಕಿ.ಮೀ. ಪ್ರಯಾಣಕ್ಕೂ ಮುಕ್ಕಾಲು ಗಂಟೆ ಬೇಕಾಗುತ್ತಿದೆ. ಸಂಬಂಧಿಸಿದ ಅಧಿಕಾರಿಗಳು ತಕ್ಷಣ ಎಚ್ಚೆತ್ತುಕೊಂಡು ರಸ್ತೆ ದುರಸ್ತಿ ಮಾಡಿ ಸಾರ್ವಜನಿಕರ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು.
> - ಸ್ಥಳೀಯ ಸಾರ್ವಜನಿಕರು

## ಸಂಕ್ಷಿಪ್ತ ಸುದ್ದಿಗಳು

# ಬೀಜದ ಉಂಡೆಗಳಿಂದ ಹಸಿರು ಕ್ರಾಂತಿಗೆ ಹೆಜ್ಜೆ





**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪರಿಸರ ಸಂರಕ್ಷಣೆ ಹಾಗೂ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಮತ್ತು ಪರಿಸರ ಜಾಗೃತಿ ಮೂಡಿಸುವ ಉದ್ದೇಶದಿಂದ ಇಲ್ಲಿನ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಇಂಜಿನಿಯರಿಂಗ್ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕ ಹಾಗೂ ಗ್ರೀನ್ ಕ್ಯಾಂಪಸ್ ವತಿಯಿಂದ ಸೀಡ್ ಬಾಲ್ (ಬೀಜದ ಉಂಡೆ) ತಯಾರಿಕಾ ಕಾರ್ಯಕ್ರಮವನ್ನು ಗುರುವಾರ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡು ಮಣ್ಣು, ಸೂಕ್ತ ಬೀಜಗಳು ಹಾಗೂ ಸಾವಯವ ವಸ್ತುಗಳನ್ನು ಬಳಸಿ ಬೀಜದ ಉಂಡೆಗಳನ್ನು ತಯಾರಿಸಿದರು. ಬೀಜದ ಉಂಡೆಗಳನ್ನು ವಿವಿಧ ಸ್ಥಳಗಳಲ್ಲಿ ಹರಡುವ ಮೂಲಕ ಪರಿಸರ ಸಂರಕ್ಷಣೆ, ಜೀವವೈವಿಧ್ಯ ರಕ್ಷಣೆ, ಹಸಿರು ಪರಿಸರ ನಿರ್ಮಾಣ ಹಾಗೂ ನೈಸರ್ಗಿಕ ಸಸ್ಯಸಂಪತ್ತಿನ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದು ವಿದ್ಯಾರ್ಥಿಗಳಿಗೆ ಪ್ರಾಯೋಗಿಕವಾಗಿ ತಿಳಿಸಲಾಯಿತು.

ಈ ಚಟುವಟಿಕೆಯ ಮೂಲಕ ವಿದ್ಯಾರ್ಥಿಗಳು ಬೀಜ ಪ್ರಸರಣ, ಸಸ್ಯಗಳ ಸ್ವಾಭಾವಿಕ ಬೆಳವಣಿಗೆ, ವೃಕ್ಷಾರೋಪಣೆ ಹಾಗೂ ಪರಿಸರ ಸಂರಕ್ಷಣೆಯ ಮಹತ್ವದ ಕುರಿತು ಪ್ರಾಯೋಗಿಕ ಜ್ಞಾನ ಪಡೆದುಕೊಂಡರು. ಪ್ರತಿಯೊಬ್ಬರ ಸಣ್ಣ ಪ್ರಯತ್ನವೂ ಪರಿಸರ ಸಂರಕ್ಷಣೆಯಲ್ಲಿ ಮಹತ್ವದ ಬದಲಾವಣೆ ತರಬಲ್ಲದು ಎಂಬ ಸಂದೇಶವನ್ನು ಕಾರ್ಯಕ್ರಮ ಸಾರಿತು.

ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಅವರ ಮಾರ್ಗದರ್ಶನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಾ. ಆರ್. ಎಂ. ಪಾಟೀಲ, ಪ್ರೊ. ಸೋಮಶೇಖರ ಕೆರಿಮನಿ, ಪ್ರೊ. ಬಸವರಾಜ ಮುರಗೋಡ, ಪ್ರೊ. ಶಿವಲಿಂಗಪ್ಪ ಡಿ.ಆರ್., ಪ್ರೊ. ಸೋಮಪ್ಪ ನವಲಗುಂದ ಹಾಗೂ ಪ್ರೊ. ಮಂಜುನಾಥ ಸೇರಿದಂತೆ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ಐತಿಹಾಸಿಕ ಗೌರಿಗುಡಿ ಜೀರ್ಣೋದ್ಧಾರಕ್ಕೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜದ ಒಗ್ಗಟ್ಟು ಮತ್ತು ಸಹಕಾರದಿಂದ ಮಾತ್ರ ಅಭಿವೃದ್ಧಿ ಕಾರ್ಯಗಳನ್ನು ಯಶಸ್ವಿಯಾಗಿ ಕೈಗೊಳ್ಳಲು ಸಾಧ್ಯ ಎಂದು ಗಣ್ಯ ಉದ್ಯಮಿ ವಿಜಯಕುಮಾರ ಗಡ್ಡಿ ಹೇಳಿದರು.

ಬೆಟಗೇರಿಯ ಹುಯಿಲಗೋಳ ರಸ್ತೆಯ ಗೌರಿಗುಡಿ ಓಣಿಯಲ್ಲಿರುವ ನೂರಾರು ವರ್ಷಗಳ ಐತಿಹಾಸಿಕ ಹಿನ್ನೆಲೆಯ ಗೌರಿಗುಡಿಯ ಜೀರ್ಣೋದ್ಧಾರ ಕಾಮಗಾರಿಯ ಸ್ಲ್ಯಾಬ್ ಹಾಕುವ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬೆಟಗೇರಿಯ ವೀರಶೈವ ಸಮಾಜವು ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿರುವ ಹಿರಿಯರು, ಯುವಕರು ಹಾಗೂ ಸಮಾಜಸೇವಕರನ್ನು ಒಳಗೊಂಡಿದೆ. ರೈತರು, ವ್ಯಾಪಾರಸ್ಥರು, ಉದ್ಯಮಿಗಳು, ಎಪಿಎಂಸಿ ವಹಿವಾಟುದಾರರು, ಶಿಕ್ಷಕರು, ಪತ್ರಕರ್ತರು, ಸರ್ಕಾರಿ ನೌಕರರು ಸೇರಿದಂತೆ ವಿವಿಧ ವೃತ್ತಿಗಳಲ್ಲಿ ಸಮಾಜದವರು ಹೆಸರು ಮಾಡಿದ್ದು, ಸಮಾಜಸೇವೆಯಲ್ಲಿಯೂ ಜನಮನ್ನಣೆ ಗಳಿಸಿದ್ದಾರೆ ಎಂದು ಹೇಳಿದರು.

ಈ ಭಾಗದ ಮಹತ್ವದ ಧಾರ್ಮಿಕ ಕೇಂದ್ರವಾಗಿರುವ ಗೌರಿಗುಡಿಯನ್ನು ಅದರ ಮೂಲಸ್ವರೂಪಕ್ಕೆ ಧಕ್ಕೆಯಾಗದಂತೆ ಜೀರ್ಣೋದ್ಧಾರ ಕೈಗೊಂಡಿರುವುದು ಶ್ಲಾಘನೀಯ ಕಾರ್ಯವಾಗಿದೆ. ಸಮಾಜದ ಎಲ್ಲರೂ ಒಗ್ಗಟ್ಟಿನಿಂದ ಸಹಕರಿಸಿದರೆ ಇಂತಹ ಅಭಿವೃದ್ಧಿ ಕಾರ್ಯಗಳನ್ನು ಇನ್ನಷ್ಟು ಯಶಸ್ವಿಯಾಗಿ ಕೈಗೊಳ್ಳಬಹುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಯುವ ಉದ್ಯಮಿಗಳಾದ ವಿಜಯಕುಮಾರ ಗಡ್ಡಿ, ರವಿ ಪಟ್ಟಣಶೆಟ್ಟಿ ಹಾಗೂ ಮೋಹನ ಮಾಳಶೆಟ್ಟಿ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜದ ಹಿರಿಯರಾದ ಪುತ್ರಪ್ಪ ಬೆಂತೂರ, ಬಸವಣ್ಣೆಪ್ಪ ಮಾಳಶೆಟ್ಟಿ, ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ಶಿವಪ್ಪ ನಾಗರಾಳ, ಪ್ರಕಾಶ ಮ್ಯಾಗೇರಿ, ಶರಣಪ್ಪ ಅಣ್ಣಿಗೇರಿ, ಶಿವಯ್ಯ ಶಿವಪ್ಪಯ್ಯನಮಠ, ಸಿದ್ದು ಮುಳ್ಳಾಳ, ಬಸವರಾಜ ಕುಂದಗೋಳ, ಸುದೀಪ ಕಣವಿ, ರಾಜು ಗೊಂಡಬಾಳ, ಸುರೇಶ ಬೆಂತೂರ, ಮಹೇಶ ಚಿಕ್ಕನಗೌಡ್ರ, ಶ್ರೀಕಾಂತ ಸೋನೆ, ಶ್ರೀನಿವಾಸ ಬೆಟಗೇರಿ, ಮಂಜುನಾಥ ಬೆಂತೂರ ಹಾಗೂ ಶರಣಪ್ಪ ಆಲೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಸಮಾಜದ ಅಭಿವೃದ್ಧಿಗೆ ಒಗ್ಗಟ್ಟು ಬಹುದೊಡ್ಡ ಶಕ್ತಿಯಾಗಿದೆ. ಎಲ್ಲರೂ ಒಂದಾಗಿ ಕೈಜೋಡಿಸಿದರೆ ಐತಿಹಾಸಿಕ ಹಾಗೂ ಧಾರ್ಮಿಕ ಕೇಂದ್ರಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಇನ್ನಷ್ಟು ಪರಿಣಾಮಕಾರಿಯಾಗಿ ಸಾಧ್ಯವಾಗುತ್ತದೆ.
> - ವಿಜಯಕುಮಾರ ಗಡ್ಡಿ

### ವರ್ಷಗಳ ಮನವಿಗೆ ಸಿಗದ ಸ್ಪಂದನೆ ▮ ಸಿಎಂ ಆಗಮನದ ಸುದ್ದಿ ಕೇಳುತ್ತಿದ್ದಂತೆ ಕೈಗಾ-ಇಳಕಲ್ ಹೆದ್ದಾರಿಗೆ ತೇಪೆ ಕಸರತ್ತು!

# ಸಿಎಂ ಬರುತ್ತಾರೆಂದರೆ ರಸ್ತೆ ಗುಂಡಿಗೂ ಅದೃಷ್ಟ





**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವರ್ಷಗಳಿಂದ ರಸ್ತೆಯಲ್ಲಿನ ಅಪಾಯಕಾರಿ ಗುಂಡಿಗಳನ್ನು ಮುಚ್ಚಿ, ಸಮಗ್ರ ಡಾಂಬರೀಕರಣ ಕೈಗೊಳ್ಳುವಂತೆ ಸಾರ್ವಜನಿಕರು ಮನವಿ ಮಾಡುತ್ತಿದ್ದರೂ ಸ್ಪಂದಿಸದ ಲೋಕೋಪಯೋಗಿ ಇಲಾಖೆ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಸೆ.1ರಂದು ಲಕ್ಷ್ಮೇಶ್ವರಕ್ಕೆ ಆಗಮಿಸಲಿದ್ದಾರೆ ಎಂಬ ಸುದ್ದಿ ಹೊರಬಿದ್ದ ಬೆನ್ನಲ್ಲೇ ಏಕಾಏಕಿ ರಸ್ತೆ ಗುಂಡಿಗಳಿಗೆ ತೇಪೆ ಹಾಕುವ ಕಾರ್ಯಕ್ಕೆ ಮುಂದಾಗಿರುವುದು ಸಾರ್ವಜನಿಕರ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಗದಗ-ಲಕ್ಷ್ಮೇಶ್ವರ ಸಂಪರ್ಕಿಸುವ ಕೈಗಾ-ಇಳಕಲ್ ರಾಜ್ಯ ಹೆದ್ದಾರಿ ಹಲವು ವರ್ಷಗಳಿಂದ ಸಂಪೂರ್ಣ ಹದಗೆಟ್ಟಿದ್ದು, ಈ ರಸ್ತೆಯಲ್ಲಿ ಸಂಚರಿಸುವುದು ವಾಹನ ಸವಾರರು ಹಾಗೂ ಪ್ರಯಾಣಿಕರಿಗೆ ನಿತ್ಯದ ಸಂಕಷ್ಟವಾಗಿದೆ. ರಸ್ತೆಯುದ್ದಕ್ಕೂ ದೊಡ್ಡ ದೊಡ್ಡ ಗುಂಡಿಗಳು ನಿರ್ಮಾಣವಾಗಿದ್ದು, ಮಳೆಗಾಲದಲ್ಲಿ ನೀರು ಹಾಗೂ ಕೆಸರು ತುಂಬಿದರೆ, ಬಿಸಿಲಿನ ದಿನಗಳಲ್ಲಿ ಧೂಳುಮಯ ವಾತಾವರಣ ನಿರ್ಮಾಣವಾಗುತ್ತಿದೆ. ರಸ್ತೆಯ ದುಸ್ಥಿತಿಯಿಂದ ವಾಹನ ಸವಾರರು ಜೀವ ಕೈಯಲ್ಲಿ ಹಿಡಿದು ಸಂಚರಿಸುವಂತಾಗಿದ್ದು, ಕೆಲವರು ಮಾರ್ಗ ಬದಲಿಸಿ ಸುತ್ತುವರಿದು ಪ್ರಯಾಣಿಸುವ ಪರಿಸ್ಥಿತಿಯೂ ನಿರ್ಮಾಣವಾಗಿದೆ. ಈ ಕುರಿತು ಸಾರ್ವಜನಿಕರು, ವಿವಿಧ ಸಂಘಟನೆಗಳು ಹಾಗೂ ಜನಪ್ರತಿನಿಧಿಗಳು ಹಲವು ವರ್ಷಗಳಿಂದ ನಿರಂತರವಾಗಿ ಹೋರಾಟ ನಡೆಸಿ, ಸಂಬಂಧಪಟ್ಟ ಇಲಾಖೆಗೆ ಮನವಿ ಸಲ್ಲಿಸುತ್ತಲೇ ಬಂದಿದ್ದಾರೆ. ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮಗಳಲ್ಲಿಯೂ ರಸ್ತೆಯ ದುಸ್ಥಿತಿಯ ಕುರಿತು ಹಲವು ಬಾರಿ ವರದಿಗಳು ಪ್ರಕಟಗೊಂಡಿವೆ. ಆದರೆ, ಇಷ್ಟೆಲ್ಲ ಮನವಿ, ಹೋರಾಟ ಮತ್ತು ಸಾರ್ವಜನಿಕರ ಗೋಳಿಗೂ ಜಗ್ಗದ ಅಧಿಕಾರಿಗಳು ಇದೀಗ ಮುಖ್ಯ ಮಂತ್ರಿ ಆಗಮನದ ಹಿನ್ನೆಲೆಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯಕ್ಕೆ ಮುಂದಾಗಿರುವುದು ಜನರ ಆಕ್ರೋಶವನ್ನು ಮತ್ತಷ್ಟು ಹೆಚ್ಚಿಸಿದೆ.

ಈ ರಸ್ತೆಯ ಸಮಗ್ರ ಅಭಿವೃದ್ಧಿಗೆ ಮಾಜಿ ಸಂಸದ ಶಿವಕುಮಾರ ಉದಾಸಿ ಅವರ ಎರಡು ಅವಧಿಯಲ್ಲಿಯೂ ಮನವಿ ಸಲ್ಲಿಸಲಾಗಿತ್ತು. ಬಳಿಕ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹಾಗೂ ಶಾಸಕ ಡಾ. ಚಂದ್ರು ಲಮಾಣಿ ಅವರಿಗೂ ಹಲವು ಬಾರಿ ಮನವಿ ಸಲ್ಲಿಸಲಾಗಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಜಿಲ್ಲೆಯ ಪ್ರಭಾವಿ ಶಾಸಕ ಎಚ್.ಕೆ. ಪಾಟೀಲ ಹಾಗೂ ಈ ಹಿಂದೆ ಲೋಕೋಪಯೋಗಿ ಇಲಾಖೆಯ ಸಚಿವರಾಗಿದ್ದ ಸಿ.ಸಿ. ಪಾಟೀಲ ಜಿಲ್ಲೆಯವರಾಗಿದ್ದರೂ ರಸ್ತೆ ಅಭಿವೃದ್ಧಿಗೆ ನಿರೀಕ್ಷಿತ ಸ್ಪಂದನೆ ದೊರೆಯಲಿಲ್ಲ ಎಂಬ ಅಸಮಾಧಾನವೂ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ.

ಮುಖ್ಯಮಂತ್ರಿ ಲಕ್ಷ್ಮೇಶ್ವರಕ್ಕೆ ರಸ್ತೆ ಮಾರ್ಗದ ಮೂಲಕ ಆಗಮಿಸುವ ಬದಲು ಹೆಲಿಕಾಪ್ಟರ್ ಮೂಲಕ ಆಗಮಿಸಲಿದ್ದಾರೆ ಎನ್ನಲಾಗುತ್ತಿದೆ. ಆದರೂ ಮುಖ್ಯಮಂತ್ರಿ ಭೇಟಿ ಹಿನ್ನೆಲೆಯಲ್ಲಿ ಏಕಾಏಕಿ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯಕ್ಕೆ ಇಲಾಖೆ ಮುಂದಾಗಿರುವುದು ಸಾರ್ವಜನಿಕರಲ್ಲಿ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

**ಅನುದಾನ ಇಲ್ಲ ಎಂದವರು ಈಗ ಯಾವ ಹಣದಲ್ಲಿ?**

ರಸ್ತೆ ಅಭಿವೃದ್ಧಿಗೆ ಅನುದಾನ ಲಭ್ಯವಿಲ್ಲ. ಕ್ರಿಯಾಯೋಜನೆ ಸಿದ್ಧಪಡಿಸಿ ಇಲಾಖೆಗೆ ಕಳುಹಿಸಲಾಗಿದೆ. ಅನುದಾನ ಬಿಡುಗಡೆಯಾದ ಬಳಿಕ ರಸ್ತೆ ಅಭಿವೃದ್ಧಿ ಕೈಗೊಳ್ಳಲಾಗುವುದು ಎಂದು ಈವರೆಗೆ ಹೇಳುತ್ತಿದ್ದ ಅಧಿಕಾರಿಗಳು, ಇದೀಗ ರಸ್ತೆ ಗುಂಡಿಗಳನ್ನು ಮುಚ್ಚುವ ಕಾಮಗಾರಿಗೆ ಯಾವ ಅನುದಾನ ಬಳಸುತ್ತಿದ್ದಾರೆ ಎಂಬುದನ್ನು ಸಾರ್ವಜನಿಕವಾಗಿ ಸ್ಪಷ್ಟಪಡಿಸಬೇಕು ಎಂದು ಶಿರಹಟ್ಟಿ ಮತಕ್ಷೇತ್ರದ ಜೆಡಿಎಸ್ ಅಧ್ಯಕ್ಷ ಶಂಕರ ಬಾಳಿಕಾಯಿ ಪ್ರಶ್ನಿಸಿದ್ದಾರೆ.


ಕೇವಲ ಗುಂಡಿಗಳಿಗೆ ಜಲ್ಲಿಕಲ್ಲು ಹಾಕುವುದರಿಂದ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯುವುದಿಲ್ಲ. ಬದಲಾಗಿ ವಾಹನ ಸಂಚಾರಕ್ಕೆ ಮತ್ತಷ್ಟು ತೊಂದರೆಯಾಗುವ ಸಾಧ್ಯತೆಯಿದೆ. ರಸ್ತೆಯುದ್ದಕ್ಕೂ ಮೊಣಕಾಲಿನಷ್ಟು ಆಳದ ಗುಂಡಿಗಳು ನಿರ್ಮಾಣವಾಗಿದ್ದು, ಈ ಹೆದ್ದಾರಿಯನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಗುಣಮಟ್ಟದ ಡಾಂಬರೀಕರಣ ಕೈಗೊಳ್ಳಬೇಕು ಎಂಬುದು ಸಾರ್ವಜನಿಕರ ಪ್ರಮುಖ ಆಗ್ರಹವಾಗಿದೆ.

ಜನರ ನಿತ್ಯದ ಸಂಚಾರಕ್ಕೆ ಅನುಕೂಲವಾಗುವಂತೆ ಕೈಗಾ-ಇಳಕಲ್ ರಾಜ್ಯ ಹೆದ್ದಾರಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು. ಕೇವಲ ಗಣ್ಯರ ಭೇಟಿ ಅಥವಾ ವಿಶೇಷ ಸಂದರ್ಭಗಳಲ್ಲಿ ತೇಪೆ ಹಾಕುವ ಕ್ರಮಕ್ಕೆ ಸೀಮಿತವಾಗದೆ, ರಸ್ತೆಯ ಸಂಪೂರ್ಣ ಅಭಿವೃದ್ಧಿಗೆ ಸರ್ಕಾರ ಹಾಗೂ ಜನಪ್ರತಿನಿಧಿಗಳು ಮುಂದಾಗಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

> ಮುಖ್ಯಮಂತ್ರಿ ಹೆಲಿಪ್ಯಾಡ್ ಮೂಲಕ ಆಗಮಿಸುತ್ತಾರೆ ಎಂಬ ಕಾರಣಕ್ಕೆ ರಸ್ತೆಯ ಗುಂಡಿಗಳನ್ನು ಮುಚ್ಚಲು ತುರ್ತು ಕ್ರಮ ಕೈಗೊಳ್ಳುವ ಅಧಿಕಾರಿಗಳು, ಇದೇ ರಸ್ತೆಯಲ್ಲಿ ಹಲವು ವರ್ಷಗಳಿಂದ ಜೀವ ಕೈಯಲ್ಲಿ ಹಿಡಿದು ಸಂಚರಿಸುತ್ತಿರುವ ಜನಸಾಮಾನ್ಯರ ಸಂಕಷ್ಟಕ್ಕೆ ಏಕೆ ಸ್ಪಂದಿಸಲಿಲ್ಲ? ಅನುದಾನ ಇಲ್ಲ ಎಂದಿದ್ದ ಅಧಿಕಾರಿಗಳು ಈಗ ಯಾವ ಹಣದಲ್ಲಿ ಕಾಮಗಾರಿ ಮಾಡುತ್ತಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಬೇಕು. ಜನರ ಕಷ್ಟಕ್ಕೆ ಸ್ಪಂದಿಸಿ ಕೈಗಾ-ಇಳಕಲ್ ರಾಜ್ಯ ಹೆದ್ದಾರಿಯನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಗುಣಮಟ್ಟದ ಡಾಂಬರೀಕರಣ ಕೈಗೊಳ್ಳಬೇಕು.
> - ಶಂಕರ ಬಾಳಿಕಾಯಿ, ಶಿರಹಟ್ಟಿ ಮತಕ್ಷೇತ್ರ ಜೆಡಿಎಸ್ ಅಧ್ಯಕ್ಷ

# ಬಿಬಿಎ ಪರೀಕ್ಷೆಯಲ್ಲಿ ಮನೋರಮಾ ಕಾಲೇಜು ವಿದ್ಯಾರ್ಥಿಗಳ ಸಾಧನೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಮನೋರಮಾ ಮಹಾವಿದ್ಯಾಲಯದ ಪ್ರಸಕ್ತ ಶೈಕ್ಷಣಿಕ ಸಾಲಿನ ಬಿಬಿಎ ಕೋರ್ಸ್‌ನ ನಾಲ್ಕನೇ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶದಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಪರೀಕ್ಷೆಯಲ್ಲಿ ಕುಮಾರಿ ಯಶಸ್ವಿನಿ ಬಾಗೇವಾಡಿ ಅವರು 601 ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ಕುಮಾರಿ ಶಹತಾಜ್ ಖಾಜಿ ಅವರು 590 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಗಳಿಸಿದ್ದು, ಕುಮಾರಿ ಸಿಮ್ರಾನ್ ನದಾಫ ಅವರು 483 ಅಂಕಗಳನ್ನು ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ.

ಇನ್ನು ಕುಮಾರಿ ಸಾನಿಯಾ ಕುರುವಿನಕೊಪ್ಪ ಅವರು 477 ಅಂಕಗಳನ್ನು ಪಡೆದು ನಾಲ್ಕನೇ ಸ್ಥಾನ ಗಳಿಸಿದ್ದಾರೆ.

ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರ್ಮನ್ ಎನ್.ಎಂ. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ ಹಾಗೂ ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ ಮತ್ತು ಚೇತನ ಕುಡತರಕರ ಶ್ಲಾಘಿಸಿದ್ದಾರೆ.

ಸಂಯೋಜಕಿ ಪ್ರೊ. ಆರತಿ ಗೌಡರ ಹಾಗೂ ಮಹಾವಿದ್ಯಾಲಯದ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳ ಸಾಧನೆಗೆ ಅಭಿನಂದನೆ ಸಲ್ಲಿಸಿ, ಅವರ ಮುಂದಿನ ಶೈಕ್ಷಣಿಕ ಭವಿಷ್ಯಕ್ಕೆ ಶುಭ ಹಾರೈಸಿದ್ದಾರೆ.

# ತಂತ್ರಜ್ಞಾನವನ್ನು ವಿವೇಚನೆಯಿಂದ ಬಳಸುವ ಜ್ಞಾನ ಅಗತ್ಯ



**ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ತಂತ್ರಜ್ಞಾನ ಯುಗದಲ್ಲಿ ಮಕ್ಕಳು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳನ್ನು ಬಳಸುವಾಗ ಒಳ್ಳೆಯದು ಮತ್ತು ಕೆಟ್ಟದ್ದರ ನಡುವಿನ ವ್ಯತ್ಯಾಸ ಅರಿಯುವ ವಿವೇಕ ಬೆಳೆಸಿಕೊಳ್ಳಬೇಕು ಎಂದು ಚಿಂತಕ ಶಂಭುಲಿಂಗಯ್ಯ ಕಲ್ಮಠ ಹೇಳಿದರು. ಗದುಗಿನ ಸರ್ಕಾರಿ ಪ್ರಾಥಮಿಕ ಶಾಲೆ ನಂ.6 ಹಾಗೂ ಉರ್ದು ಪ್ರಾಥಮಿಕ ಶಾಲೆ ನಂ.3ರಲ್ಲಿ ಗದಗ ಜಿಲ್ಲಾ ಶರಣ ಸಂಕುಲದ ಶರಣೆ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆಯಿಂದ ಹಮ್ಮಿಕೊಂಡಿದ್ದ 'ಅಮೃತಭೋಜನ-ಜ್ಞಾನಸಿಂಚನ' ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸಿಹಿ ಭೋಜನ ವಿತರಿಸಿ ಅವರು ಮಾತನಾಡಿದರು.

ಮಕ್ಕಳಿಗೆ ಉತ್ತಮ ಸಂಸ್ಕಾರ ಹಾಗೂ ಮೌಲ್ಯಯುತ ಬದುಕಿನ ದಾರಿ ತೋರಿಸುವುದು ದೊಡ್ಡ ಆಸ್ತಿಯಾಗಿದ್ದು, ಹಿರಿಯರ ಆದರ್ಶಗಳನ್ನು ಅಳವಡಿಸಿಕೊಂಡು ಮುನ್ನಡೆಯಬೇಕು ಎಂದರು. ಮುಖ್ಯ ಅತಿಥಿ ಚಂಪಾ ಪಾಟೀಲ ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಿಸಿ, ಮಾನವೀಯತೆ, ಸಹಕಾರ ಹಾಗೂ ದೇಶಪ್ರೇಮವನ್ನು ರೂಢಿಸಿಕೊಳ್ಳುವಂತೆ ಕರೆ ನೀಡಿದರು. ಸುಮತಿ ಗದಗಿನಮಠ ಅವರು ಶರಣರ ವಚನಗಳನ್ನು ಓದಿ ಅವುಗಳ ತತ್ವದಂತೆ ಬದುಕಬೇಕು ಎಂದರು.

ವೇದಿಕೆಯ ಸಂಚಾಲಕಿ ಕವಿತಾ ದಂಡಿನ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಖ್ಯೋಪಾಧ್ಯಾಯಿನಿ ಎಂ.ಎ. ಕಂದಗಲ್ಲ ಸ್ವಾಗತಿಸಿದರು. ಎಸ್.ಎಸ್. ಕುಷ್ಟಗಿ ನಿರೂಪಿಸಿದರು. ಎ.ಎಸ್. ಮಸೂತಿ ವಂದಿಸಿದರು. ಅಕ್ಷತಾ ವಿಲ್ಲಾಯತ್, ಎಂ.ಐ. ಜಮಾಲಸಾಬನವರ, ಬಿ. ಹೂಗಾರ, ಸಾವಿತ್ರಿ ಬಳ್ಳಾರಿ, ಮಹೇಶ ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಬೆಳಗ್ಗೆ 5ರಿಂದ ರಾತ್ರಿ 10ರವರೆಗೆ ಸರತಿ ಸಾಲು ▮ ವೃದ್ಧರು, ಮಹಿಳೆಯರು, ಕೂಲಿ ಕಾರ್ಮಿಕರ ಗೋಳು!

# ಸರ್ವರ್ ಸ್ತಬ್ಧ... ಅನ್ನಭಾಗ್ಯಕ್ಕಾಗಿ ಜನರ ಪರದಾಟ!



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಕೇಂದ್ರ ಹಾಗೂ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಅನ್ನಭಾಗ್ಯ ಯೋಜನೆಯಡಿ ದೊರೆಯುವ ಪಡಿತರ ಅಕ್ಕಿಗಾಗಿ ಫಲಾನುಭವಿಗಳು ಶನಿವಾರ ದಿನವಿಡೀ ಸರತಿ ಸಾಲಿನಲ್ಲಿ ನಿಂತು ಪರದಾಡಿದ ದೃಶ್ಯ ಮುಳಗುಂದ ಪಟ್ಟಣದ ನ್ಯಾಯಬೆಲೆ ಅಂಗಡಿಗಳ ಮುಂದೆ ಕಂಡುಬಂತು.

ಆನ್‌ಲೈನ್ ಪಡಿತರ ವಿತರಣಾ ವ್ಯವಸ್ಥೆಯಲ್ಲಿ ಉಂಟಾದ ಸರ್ವರ್ ಸಮಸ್ಯೆಯಿಂದ ಫಲಾನುಭವಿಗಳ ದೃಢೀಕರಣ ಹಾಗೂ ಪಡಿತರ ವಿತರಣೆಯಲ್ಲಿ ವಿಳಂಬ ಉಂಟಾಗಿತ್ತು. ಪರಿಣಾಮವಾಗಿ ಬೆಳಗ್ಗೆಯಿಂದಲೇ ಸರತಿ ಸಾಲಿನಲ್ಲಿ ನಿಂತಿದ್ದ ವೃದ್ಧರು, ಮಹಿಳೆಯರು ಹಾಗೂ ಕೂಲಿ ಕಾರ್ಮಿಕರು ಪಡಿತರ ಅಕ್ಕಿ ಪಡೆಯಲಾಗದೆ ತೀವ್ರ ಸಂಕಷ್ಟ ಅನುಭವಿಸಿದರು.

ಕೆಲವರು ಶನಿವಾರ ಬೆಳಗ್ಗೆ 5 ಗಂಟೆಯಿಂದಲೇ ನ್ಯಾಯಬೆಲೆ ಅಂಗಡಿಗಳ ಮುಂದೆ ಬಂದು ಸರತಿ ಸಾಲಿನಲ್ಲಿ ನಿಂತಿದ್ದರು. ರಾತ್ರಿ 10 ಗಂಟೆಯಾದರೂ ಕೆಲವರಿಗೆ ತಮ್ಮ ಸರದಿ ಬಾರದ ಸ್ಥಿತಿ ನಿರ್ಮಾಣವಾಗಿದ್ದು, ಅನ್ನಭಾಗ್ಯದ ಅಕ್ಕಿಗಾಗಿ ಇಡೀ ದಿನ ಕಾಯಬೇಕಾದ ದುಸ್ಥಿತಿ ಫಲಾನುಭವಿಗಳದ್ದಾಗಿತ್ತು.

**ಸರ್ವರ್ ಸಮಸ್ಯೆಯಿಂದ ವಿತರಣೆ ವಿಳಂಬ**

ಪಡಿತರ ವಿತರಣೆಗೆ ಅಗತ್ಯವಿರುವ ಆನ್‌ಲೈನ್ ವ್ಯವಸ್ಥೆಯಲ್ಲಿ ಸರ್ವರ್ ಸಮಸ್ಯೆ ಕಾಣಿಸಿಕೊಂಡಿದ್ದರಿಂದ ಫಲಾನುಭವಿಗಳ ಬಯೋಮೆಟ್ರಿಕ್ ದೃಢೀಕರಣ ಸೇರಿದಂತೆ ವಿತರಣಾ ಪ್ರಕ್ರಿಯೆಗೆ ತೀವ್ರ ಅಡ್ಡಿಯಾಗಿತ್ತು. ಗಂಟೆಗಟ್ಟಲೆ ಕಾಯುತ್ತಿದ್ದರೂ ಅಕ್ಕಿ ಪಡೆಯಲು ಸಾಧ್ಯವಾಗದೆ ಅನೇಕ ಫಲಾನುಭವಿಗಳು ಅಸಮಾಧಾನ ವ್ಯಕ್ತಪಡಿಸಿದರು.

**ವೃದ್ಧರು, ಮಹಿಳೆಯರ ಗೋಳು**

ಪಡಿತರಕ್ಕಾಗಿ ಸರತಿ ಸಾಲಿನಲ್ಲಿ ನಿಂತವರಲ್ಲಿ ಹೆಚ್ಚಿನವರು ವೃದ್ಧರು ಹಾಗೂ ಮಹಿಳೆಯರಾಗಿದ್ದರು. ದೀರ್ಘಕಾಲ ನಿಂತುಕೊಳ್ಳಲಾಗದೆ ಕೆಲ ವೃದ್ಧರು ಅಸ್ವಸ್ಥಗೊಂಡು ಮನೆಗೆ ಮರಳುವಂತಾಗಿತ್ತು. ಈ ತಿಂಗಳ ಪಡಿತರ ಅಕ್ಕಿ ದೊರೆಯುತ್ತದೆಯೋ ಇಲ್ಲವೋ ಎಂಬ ಆತಂಕವೂ ಫಲಾನುಭವಿಗಳನ್ನು ಕಾಡುತ್ತಿತ್ತು. ವಿಶೇಷವಾಗಿ ಆರ್ಥಿಕವಾಗಿ ದುರ್ಬಲ ಕುಟುಂಬಗಳು ಅನ್ನಭಾಗ್ಯದ ಅಕ್ಕಿಯನ್ನೇ ನಂಬಿಕೊಂಡಿರುವುದರಿಂದ ಸರ್ವರ್ ಸಮಸ್ಯೆ ಅವರ ಜೀವನದ ಮೇಲೆ ನೇರ ಪರಿಣಾಮ ಬೀರುವಂತಾಗಿತ್ತು.

**ದುಡಿಮೆ ಬಿಟ್ಟು ಪಡಿತರಕ್ಕಾಗಿ ಕಾಯುವ ಸ್ಥಿತಿ**

ಮುಳಗುಂದ ಪ್ರದೇಶವು ಕೃಷಿ ಪ್ರಧಾನ ಪ್ರದೇಶವಾಗಿದ್ದು, ಪ್ರಸಕ್ತ ವರ್ಷ ಸಮರ್ಪಕ ಮುಂಗಾರು ಮಳೆಯಾಗದೆ ರೈತರು ಈಗಾಗಲೇ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅಲ್ಪಸ್ವಲ್ಪ ಉಳಿದಿರುವ ಬೆಳೆಗಳನ್ನು ಉಳಿಸಿಕೊಳ್ಳಲು ರೈತರು ಹರಸಾಹಸ ಪಡುತ್ತಿರುವ ಸಂದರ್ಭದಲ್ಲೇ, ಅನೇಕ ಕುಟುಂಬಗಳು ತಮ್ಮ ದಿನನಿತ್ಯದ ಜೀವನಕ್ಕಾಗಿ ಅನ್ನಭಾಗ್ಯ ಯೋಜನೆಯ ಪಡಿತರ ಅಕ್ಕಿಯನ್ನು ಅವಲಂಬಿಸಿವೆ.

ಆದರೆ ಶನಿವಾರ ಸರ್ವರ್ ಸಮಸ್ಯೆಯಿಂದ ಕೂಲಿ ಕಾರ್ಮಿಕರು ತಮ್ಮ ದಿನದ ಕೆಲಸಕ್ಕೆ ತೆರಳದೆ ದಿನವಿಡೀ ನ್ಯಾಯಬೆಲೆ ಅಂಗಡಿಗಳ ಮುಂದೆ ಕಾಯುವ ಸ್ಥಿತಿ ನಿರ್ಮಾಣವಾಗಿತ್ತು. ಒಂದೆಡೆ ದುಡಿಮೆ ಇಲ್ಲ, ಇನ್ನೊಂದೆಡೆ ಪಡಿತರವೂ ಸಿಗುತ್ತಿಲ್ಲ ಎಂಬ ಪರಿಸ್ಥಿತಿಯಲ್ಲಿ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳು ತೀವ್ರ ಸಂಕಷ್ಟ ಅನುಭವಿಸುತ್ತಿದ್ದವು.

"ನಮ್ಮ ಗೋಳು ಕೇಳುವವರು ಯಾರು?" ಎಂಬ ಪ್ರಶ್ನೆ ಫಲಾನುಭವಿಗಳಿಂದ ಕೇಳಿಬರುತ್ತಿತ್ತು.

ಪಡಿತರ ಅಕ್ಕಿಯನ್ನೇ ನಂಬಿಕೊಂಡು ಜೀವನ ಸಾಗಿಸುತ್ತಿರುವ ಸಾಕಷ್ಟು ಕುಟುಂಬಗಳು, ಈ ತಿಂಗಳ ಅಕ್ಕಿ ದೊರೆಯದಿದ್ದರೆ ದಿನನಿತ್ಯದ ಜೀವನ ನಿರ್ವಹಣೆ ಕಷ್ಟವಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಪಡಿತರ ವಿತರಣೆಯಲ್ಲಿ ಪದೇಪದೇ ತಾಂತ್ರಿಕ ಹಾಗೂ ಸರ್ವರ್ ಸಮಸ್ಯೆಗಳು ಉಂಟಾಗುತ್ತಿರುವುದರಿಂದ ಸರ್ಕಾರ ಮತ್ತು ಆಹಾರ ಇಲಾಖೆ ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂಬುದು ಫಲಾನುಭವಿಗಳ ಒತ್ತಾಯವಾಗಿತ್ತು.

ಕೂಲಿ ಕಾರ್ಮಿಕರು ತಮ್ಮ ಕೆಲಸ ಬಿಟ್ಟು ದಿನವಿಡೀ ಸರತಿ ಸಾಲಿನಲ್ಲಿ ನಿಲ್ಲಬೇಕಾದ ಪರಿಸ್ಥಿತಿಗೆ ತೆರೆ ಎಳೆಯಬೇಕು. ಪಡಿತರ ವಿತರಣೆಗೆ ಸುಗಮವಾದ ತಾಂತ್ರಿಕ ವ್ಯವಸ್ಥೆ ಕಲ್ಪಿಸಿ, ಯಾವುದೇ ಫಲಾನುಭವಿಯೂ ಪಡಿತರದಿಂದ ವಂಚಿತರಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದರು.

> ಗದಗ ಜಿಲ್ಲೆಯಲ್ಲಿ ಪಡಿತರ ವಿತರಣೆಯ ಶೇ.79ರಷ್ಟು ಪ್ರಕ್ರಿಯೆ ಈಗಾಗಲೇ ಪೂರ್ಣಗೊಂಡಿದೆ. ಉಳಿದ ಶೇ.21ರಷ್ಟು ವಿತರಣೆಯನ್ನು ಮುಂದಿನ ಮೂರು ದಿನಗಳಲ್ಲಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಸರ್ವರ್ ಸಮಸ್ಯೆಯಿಂದ ಫಲಾನುಭವಿಗಳಿಗೆ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದ್ದು, ಶೀಘ್ರದಲ್ಲಿಯೇ ಸಮಸ್ಯೆ ಬಗೆಹರಿಸಲಾಗುವುದು.
> - ಎಸ್.ಡಿ. ಪಾಟೀಲ, ಆಹಾರ ಇಲಾಖೆ ಉಪನಿರ್ದೇಶಕ

> ಸರ್ವರ್ ಸಮಸ್ಯೆಯಿಂದ ಕೂಲಿ ಕಾರ್ಮಿಕರಿಗೆ ತೀವ್ರ ತೊಂದರೆಯಾಗುತ್ತಿದೆ. ದಿನದ ಕೆಲಸ ಬಿಟ್ಟು ಪಡಿತರಕ್ಕಾಗಿ ಕಾಯಬೇಕಾಗಿದೆ. ಫಲಾನುಭವಿಗಳಿಗೆ ತೊಂದರೆಯಾಗದಂತೆ ಸುಗಮವಾದ ಸರ್ವರ್ ವ್ಯವಸ್ಥೆ ಕಲ್ಪಿಸಬೇಕು.
> - ರಿಯಾಜ್ ಮುಲ್ಲಾ, ಫಲಾನುಭವಿ, ಮುಳಗುಂದ

# ಶಿರಹಟ್ಟಿ ತಾಲೂಕನ್ನು ಬರಪೀಡಿತ ಎಂದು ಘೋಷಿಸಲು ಆಗ್ರಹ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ತಾಲೂಕನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಿ, ರೈತರಿಗೆ ಸಮರ್ಪಕ ಬೆಳೆ ಪರಿಹಾರ, ಸಾಲದ ನೆರವು ಹಾಗೂ ಜಾನುವಾರುಗಳ ರಕ್ಷಣೆಗಾಗಿ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಭಾರತೀಯ ಕಿಸಾನ್ ಸಂಘದ ತಾಲೂಕು ಘಟಕದ ವತಿಯಿಂದ ಸೋಮವಾರ ತಹಶೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ರೈತ ಮುಖಂಡರಾದ ಚನಬಸವಗೌಡ ಪಾಟೀಲ ಹಾಗೂ ರಮೇಶ ಕೋಳಿವಾಡ ಮಾತನಾಡಿ, ರಾಜ್ಯದಲ್ಲಿ ಈಗಾಗಲೇ 101 ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಲಾಗಿದ್ದು, ಗದಗ ಜಿಲ್ಲೆಯಲ್ಲಿ ಮಾತ್ರ ಕೇವಲ ಒಂದು ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಶಿರಹಟ್ಟಿ ತಾಲೂಕು ಕೂಡ ಬರದ ಸಂಕಷ್ಟವನ್ನು ಎದುರಿಸುತ್ತಿದ್ದು, ಕೆರೆ,ಕಟ್ಟೆಗಳು ಹಾಗೂ ಇತರೆ ಜಲಮೂಲಗಳಲ್ಲಿನ ನೀರಿನ ಮಟ್ಟ ತೀವ್ರವಾಗಿ ಕುಸಿದಿದೆ. ಕೃಷಿ ಚಟುವಟಿಕೆ ಸಂಪೂರ್ಣ ಹಿನ್ನಡೆ ಕಂಡಿದ್ದು, ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ತಿಳಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka